ಕ್ರಾಂತಿಯ ಕಿಡಿ

# ಕಾಯಕ ಯೋಗಿ

ಸಂಪಾದಕರು : ಬಿ.ಕೆ. ಅರುಣಜ್ಯೋತಿ

KAYAKAYOGI - Morning Daily

ಕನ್ನಡ ದಿನಪತ್ರಿಕೆ

| ಮಂಡ್ಯ Mandya | ಸಂಪುಟ - 04 Volume - 04 | ಸಂಚಿಕೆ - 84 Issue - 84 | RNI No.KARKAN/2018/77805 POST NO. KA/SK/MND/999/2019-2021 | ಗುರುವಾರ Thursday | 08-07-2021 | ಪುಟ - 04 Page - 04 | ಬೆಲೆ-ರೂ. 02 Price - 02 | ಸಂಪರ್ಕ 9980605484 | E-mail kayakayoginews@gmail.com |
|---|---|---|---|---|---|---|---|---|---|

ask ಮೈಸೂರು

ಪರಿಸರ, ಪ್ರವಾಸೋದ್ಯಮ, ಆರೋಗ್ಯ, ವ್ಯವಹಾರ, ಕೃಷಿ, ಶಿಕ್ಷಣ, ಜೀವನ ಶೈಲಿ, ಸಂಸ್ಕೃತಿ, ವನ್ಯಜೀವಿಗಳು, ಸಾಧಕರು, ವ್ಯವಹಾರ ಹಾಗೂ ಉತ್ಪನ್ನಗಳ ಮಾಹಿತಿ, ಸುದ್ದಿ ಮತ್ತು ಜಾಹಿರಾತುಗಳು.

FREE CLASSIFIEDS

Visit: askmysuru.com/news

9742 9742 34 askmysuru

# ಜೀವನಾಡಿ ಕನ್ನಂಬಾಡಿ ಭದ್ರ

## ಜಲಾಶಯ ಬಿರುಕುಬಿಟ್ಟಿಲ್ಲ : ಎಂಜಿನಿಯರ್



ಮಂಡ್ಯ: ಕೆಆರ್‌ಎಸ್ ಜಲಾಶಯದ ಸುರಕ್ಷತೆ ಕುರಿತು ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಹಾಗೂ ಸಂಸದೆ ಸುಮಲತಾ ಅವರ ನಡುವೆ ಆರೋಪ, ಪ್ರತ್ಯಾರೋಪ ನಡೆಯುತ್ತಿರುವ ಸಂದರ್ಭದಲ್ಲಿ ಕಾವೇರಿ ನೀರಾವರಿ ನಿಗಮದ ಅಧೀಕ್ಷಕ ಎಂಜಿನಿಯರ್ ವಿಜಯ್‌ಕುಮಾರ್ ಜಲಾಶಯ ಕುರಿತು ಸ್ಪಷ್ಟನೆ ನೀಡಿದ್ದಾರೆ.

ಸುದ್ದಿಗಾರರ ಜೊತೆ ಮಾತನಾಡಿದ ಅವರು 'ಕೆಆರ್‌ಎಸ್ ಜಲಾಶಯದಲ್ಲಿ ಯಾವುದೇ ರೀತಿಯಾಗಿ ಬಿರುಕು ಕಂಡುಬಂದಿಲ್ಲ. ಈ ಕುರಿತು ಪರಿಶೀಲನೆ ನಡೆಸಿ ಸರ್ಕಾರಕ್ಕೆ ಸಮಗ್ರ ವರದಿ ನೀಡಲಾಗಿದೆ. ನಿಗಮದ ತಂತ್ರಜ್ಞರು ಪ್ರತಿನಿತ್ಯ ಜಲಾಶಯದ ಸುರಕ್ಷತೆ ಪರಿಶೀಲನೆ ನಡೆಸುತ್ತಾರೆ. ಜಲಾಶಯ ಭದ್ರವಾಗಿದ್ದು ಸಾರ್ವಜನಿಕರು ಯಾವುದೇ ಆತಂಕ ಪಡುವ ಅಗತ್ಯವಿಲ್ಲ' ಎಂದು ತಿಳಿಸಿದರು.

'ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ (ದಿಶಾ) ಸಭೆ ವೇಳೆ ಸಂಸದೆ ಸುಮಲತಾ ಅವರಿಗೂ ಇದೇ ಮಾಹಿತಿ ನೀಡಲಾಗಿದೆ. ಬಿರುಕು ಬಿಟ್ಟಿದೆ ಎಂಬುದು ಕೇವಲ ಊಹಾಪೋಹ' ಎಂದರು.

'ಜಲಾಶಯದಲ್ಲಿ ಕ್ರಸ್ಟ್ ಗೇಟ್ ಬದಲಾವಣೆ ಕಾಮಗಾರಿ ನಡೆಯುತ್ತಿದೆ. ಬದಲಿ ಗೇಟ್ ಅಳವಡಿಸುವಾಗ ಕಲ್ಲುಗಳನ್ನು ಹೊರಗೆ ತೆರೆಯಲಾಗಿದೆ. ಕೆಲ ಕಿಡಿಗೇಡಿಗಳು ಅದರ ವಿಡಿಯೊ ತೆಗೆದು ಜಲಾಶಯವೇ ಬಿರುಕುಬಿಟ್ಟಿದೆ ಎಂಬ ಸುಳ್ಳು ಸುದ್ದಿ ಹರಡಿಸಿದ್ದಾರೆ. ಇದನ್ನು ಯಾರೂ ನಂಬಬಾರದು' ಎಂದು ಹೇಳಿದರು.

ರಾಜ್ಯದ ಪ್ರತಿಷ್ಠಿತ ಅಣೆಕಟ್ಟು ಕೆಆರ್‌ಎಸ್‌ಗೆ 90 ವರ್ಷ ವಯಸ್ಸಾಗಿದ್ದರೂ ಎಂದೂ ಸಮಸ್ಯೆ ಆಗಿಲ್ಲ. ಇದನ್ನು ದೊಡ್ಡ ಸೈಜ್ ಗಲ್, ಸುಣ್ಣ, ಕೆಂಪು ಮಣ್ಣು ಮಿಶ್ರಣ ಮಾಡಿ ನಿರ್ಮಿಸಲಾಗಿದೆ. ಅಂದಿನ ಮಹಾರಾಜರ ಹಾಗೂ ವಿಶ್ವೇಶ್ವರಯ್ಯ ಅವರ ದೂರದೃಷ್ಟಿ ಇದು. ಆಗಾಗ ಕೊಂಚ ಸಮಸ್ಯೆಗಳಾಗಿರಬಹುದು ಆದರೆ ಬಿರುಕು ಬಿಡುವ ಸಮಯ ಬಂದಿಲ್ಲ ಎಂದು ಕಾವೇರಿ ನಿರ್ವಹಣಾ ಸಲಹಾ ಸಮಿತಿ ಸಂಚಾಲಕ ತಜ್ಞ ಇಂಜಿನಿಯರ್ ಎಂ.ಲಕ್ಷ್ಮಣ್ ತಿಳಿಸಿದರು. ಇದೇ ವೇಳೆ ಡ್ಯಾಂ ಆಸುಪಾಸಿನಲ್ಲಿ ಗಣಿಗಾರಿಕೆ ನಡೆಯುತ್ತಿದ್ದು ಅದರ ಪರಿಣಾಮ ಆಗಿರುವುದು ನಿಜ ಆದರೆ ಬಿರುಕು ಬಿಟ್ಟಿಲ್ಲ, ಈ ಬಗ್ಗೆ ರಾಜಕೀಯ ಬೇಡ ಎಂದರು.

## ಜಲ ಜೀವನ್ ಮಿಷನ್ ಯೋಜನೆ

## ಅವಧಿಯೊಳಗಾಗಿ ಪೂರ್ಣಗೊಳಿಸಿ: ಡಾ.ವಿರಾಮ್ ಪ್ರಸಾತ್



ಮಂಡ್ಯ : ಜಲ ಜೀವನ್ ಮಿಷನ್ ಯೋಜನೆಯಡಿ ತೆಗೆದುಕೊಳ್ಳಲಾಗಿರುವ ಕಾಮಗಾರಿಗಳನ್ನು ನಿಗದಿತ ಅವಧಿಯೊಳಗಾಗಿ ಪೂರ್ಣಗೊಳಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಜಿ.ಪಂ. ಆಡಳಿತಾಧಿಕಾರಿ ಡಾ॥ ವಿ.ರಾಮ್ ಪ್ರಸಾತ್ ಮನೋಹರ್ ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಬುಧವಾರ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗದ ಅಧಿಕಾರಿಗಳು ಹಾಗೂ ಯೋಜನೆಯಡಿ ಅಭಿವೃದ್ಧಿ ಕಾಮಗಾರಿಗಳ ಗುತ್ತಿಗೆ ಪಡೆದಿರುವ ಏಜೆನ್ಸಿಗಳು/ ಗುತ್ತಿಗೆದಾರರ ಸಭೆ ನಡೆಸಿ ಮಾತನಾಡಿದರು.

2020-21ನೇ ಸಾಲಿನಲ್ಲಿ ಜಲ ಜೀವನ್ ಮಿಷನ್ ಯೋಜನೆಯಡಿ ಜಿಲ್ಲೆಯಲ್ಲಿ ಒಟ್ಟು 80 ಸಾವಿರ ಮನೆಗಳಿಗೆ ಕಾರ್ಯಾತ್ಮಕ ನಳ ಸಂಪರ್ಕ ಕಲ್ಪಿಸಬೇಕಿದ್ದರೂ ಪ್ರಗತಿ ನಿರೀಕ್ಷಿತ ಮಟ್ಟದಲ್ಲಿ ಇರುವುದಿಲ್ಲ. ಆದ್ದರಿಂದ, ಸದರಿ ಕಾಮಗಾರಿಗಳನ್ನು ಸೆಪ್ಟೆಂಬರ್ ಮಾಹೆಯ ಅಂತ್ಯದೊಳಗಾಗಿ ಪೂರ್ಣಗೊಳಿಸುವಂತೆ ಅಧಿಕಾರಿಗಳು ಮತ್ತು ಏಜೆನ್ಸಿಗಳು/ ಗುತ್ತಿಗೆದಾರರಿಗೆ ಸೂಚನೆ ನೀಡಿದ ಅವರು, ಈ ಸಂಬಂಧ ಸ್ಥಳೀಯವಾಗಿ ಉದ್ಭವಿಸಬಹುದಾದ ಸಮಸ್ಯೆಗಳನ್ನು ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರೇ ಪರಿಹರಿಸಲು ಕ್ರಮವಹಿಸಬೇಕು ಎಂದರು.

**ಬಹುಗ್ರಾಮ ಕುಡಿಯುವ ನೀರು ಯೋಜನೆ :**

ಮಂಡ್ಯ ಜಿಲ್ಲೆಯಲ್ಲಿ ಒಟ್ಟು 11 ಬಹುಗ್ರಾಮ ಕುಡಿಯುವ ನೀರು ಯೋಜನೆಗಳ ಕಾಮಗಾರಿಗಳು ವಿವಿಧ ಹಂತದಲ್ಲಿ ಪ್ರಗತಿಯಲ್ಲಿದ್ದು, ಈ ಸಂಬಂಧ ಇರುವ ತೊಡಕುಗಳನ್ನು ಇತ್ಯರ್ಥಪಡಿಸುವ ನಿಟ್ಟಿನಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು ನಿರಂತರವಾಗಿ ಅನುಸರಣೆ ಮಾಡಬೇಕು. ಕಾಮಗಾರಿಗಳನ್ನು ಆದಷ್ಟು ಬೇಗ ಪೂರ್ಣಗೊಳಿಸಿ ಜನರಿಗೆ ಶುದ್ಧ ಕುಡಿಯುವ ನೀರು ಒದಗಿಸಲು ಕ್ರಮವಹಿಸಬೇಕು ಎಂದು ಹೇಳಿದರು.

**ಶುದ್ಧ ಕುಡಿಯುವ ನೀರು ಘಟಕ**

ಶುದ್ಧ ಕುಡಿಯುವ ನೀರು ಘಟಕಗಳ ನಿರಂತರವಾಗಿ ಕಾರ್ಯನಿರ್ವಹಿಸುತ್ತಿರಬೇಕು. ಒಂದು ವೇಳೆ ನೀರು ಘಟಕಗಳಿಗೆ ಸಂಬಂಧಿಸಿದಂತೆ ಏನಾದರೂ ಸಮಸ್ಯೆಗಳು ಎದುರಾದಲ್ಲಿ ಒಂದು ವಾರದ ಅವಧಿಯಲ್ಲಿ ಇತ್ಯರ್ಥಗೊಳಿಸಬೇಕು. ಸಹಾಯವಾಣಿ ಸಂಖ್ಯೆ (94809 85555)ಯನ್ನು ಘಟಕಗಳ ಮೇಲೆ ಪ್ರದರ್ಶಿಸಬೇಕು. ಈ ಕುರಿತು ಸಾರ್ವಜನಿಕರಿಂದ ಸ್ವೀಕೃತವಾಗುವ ದೂರುಗಳಿಗೆ ತಕ್ಷಣ ಸ್ಪಂದಿಸಬೇಕು ಎಂದು ಸಲಹೆ ನೀಡಿದರು.

ಈಗಾಗಲೇ ಪೂರ್ಣಗೊಂಡಿರುವ ಕುಡಿಯುವ ನೀರು ಯೋಜನೆಗಳಿಗೆ ಪ್ರಥಮಾದ್ಯತೆ ನೀಡಿ ವಿದ್ಯುತ್ ಸಂಪರ್ಕ ಕಲ್ಪಿಸಬೇಕು ಹಾಗೂ ಪ್ರಗತಿಯಲ್ಲಿ ಕಾಮಗಾರಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ಕೋರಿ ಪ್ರಸ್ತಾವನೆಗಳನ್ನು ತುರ್ತಾಗಿ ಸಂಬಂಧಪಟ್ಟ ಸೆಸ್ಕ್ ಅಧಿಕಾರಿಗಳಿಗೆ ಸಲ್ಲಿಸುವಂತೆ ಸೂಚನೆ ನೀಡಿದರು.

ಜಿ.ಪಂ. ಸಿಇಓ ದಿವ್ಯಾ ಪ್ರಭು ಜಿ.ಆರ್.ಜೆ. ಅವರು ಮಾತನಾಡಿ, 2021-22ನೇ ಸಾಲಿನ ಕುಡಿಯುವ ನೀರು ಯೋಜನೆಗಳ ಕ್ರಿಯಾಯೋಜನೆಗೆ ಸರ್ಕಾರದಿಂದ ಅನುಮೋದನೆ ಪಡೆಯುವ ಸಂಬಂಧ ನ್ಯೂನ್ಯತೆಗಳನ್ನು ಸರಿಪಡಿಸಿ ಸಲ್ಲಿಸುವಂತೆ ಕಾರ್ಯಪಾಲಕ ಎಂಜಿನಿಯರ್‌ಗೆ ಸೂಚನೆ ನೀಡಿದರು.

ಕಾರ್ಯಪಾಲಕ ಎಂಜಿನಿಯರ್ ಕುಮಾರ್, ಯೋಜನಾ ನಿರ್ದೇಶಕರು (ಡಿ.ಆರ್.ಡಿ.ಎ) ಅಥಿಕ್ ಪಾಷ ಉಪಸ್ಥಿತರಿದ್ದರು..

## ಅಣೆಕಟ್ಟೆ ಬಿರುಕು ಹೇಳಿಕೆ ಮುಚ್ಚಿಕೊಳ್ಳಲು ಗಣಿಗಾರಿಕೆ ಸ್ಥಳಕ್ಕೆ ಭೇಟಿ

ಪಾಂಡವಪುರ : ವಿಶ್ವವಿಖ್ಯಾತ ಕೆಆರ್‌ಎಸ್ ಅಣೆಕಟ್ಟೆ ಬಿರುಕು ಹೇಳಿಕೆ ಮುಚ್ಚಿಕೊಳ್ಳಲು ಸಂಸದೆ ಸುಮಲತಾ ಅಂಬರೀಶ್ ಬೇಬಿ ಬೆಟ್ಟದ ಗಣಿಗಾರಿಕೆ ಸ್ಥಳಕ್ಕೆ ಭೇಟಿ ನೀಡುತ್ತಿದ್ದಾರೆ ಎಂದು ಶಾಸಕ ಸಿ.ಎಸ್.ಪುಟ್ಟರಾಜು ವ್ಯಂಗ್ಯವಾಡಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಗಣಿಗಾರಿಕೆ ಸ್ಥಳಕ್ಕೆ ಹೋಗುವುದು ಸಂಸದರ ಡ್ಯೂಟಿನಾ? ಸುಮಲತಾ ಅಂಬರೀಶ್ ಅವರು ತಮ್ಮ ಇತಿ ಮಿತಿ ತಿಳಿದುಕೊಂಡು ಕೆಲಸ ಮಾಡಲಿ ಎಂದು ಸಲಹೆ ನೀಡಿದರು.

ನಮ್ಮೆಲ್ಲರಿಗೂ ಕನ್ನಂಬಾಡಿ ಅಣೆಕಟ್ಟೆ ಹಿತವೇ ಮುಖ್ಯ. ನಾನು ಜಿಲ್ಲಾ ಉಸ್ತುವಾರಿ ಸಚಿವನಾಗಿದ್ದಾಗಲೇ ಬೇಬಿ ಬೆಟ್ಟದಲ್ಲಿ ಗಣಿಗಾರಿಕೆ ನಿಲ್ಲಿಸಿದ್ದೆ. ಆದರೆ ಸಂಸದೆ ಸುಮಲತಾ ಅಂಬರೀಶ್ ಅವರು ಮೊನ್ನೆವರೆಗೂ ಕನ್ನಂಬಾಡಿ ಕಟ್ಟೆ ಹೆಸರೇಳಿಕೊಂಡು ಬಂದ್ರು, ಅಲ್ಲಿ ಏನು ಇಲ್ಲ ಎಂದಾಗ ಗಣಿಗಾರಿಕೆ ಪತ್ತೆ ಮಾಡಲು ಇದೀಗ ಹೊರಟಿದ್ದಾರೆ ಎಂದು ಛೇಡಿಸಿದರು.

# ಜಿಲ್ಲೆಯ ರಾಜಕಾರಣ ಕಲುಷಿತ

## ಸಂಸದೆ ಸುಮಲತಾ ಅಂಬರೀಶ್ ವಿಷಾದ




ಮಂಡ್ಯ : ರಾಜಕಾರಣ ತುಂಬಾ ಕಲುಷಿತಗೊಂಡಿದೆ. ಸಭ್ಯ ರಾಜಕಾರಣ ಎನ್ನುವುದು ದಿನದಿಂದ ದಿನಕ್ಕೆ ಮರೆಯಾಗುತ್ತಿದೆ. ಯುವಕರು ರಾಜಕಾರಣ ಪ್ರವೇಶಿಸುವುದರೊಂದಿಗೆ ಸ್ವಚ್ಛ ವಾತಾವರಣ ನಿರ್ಮಿಸಬೇಕಿದೆ ಎಂದು ಹೇಳಿದರು.

ತಾಲೂಕಿನ ಇಂಡುವಾಳು ಗ್ರಾಮದಲ್ಲಿ ಎನ್.ಶಂಕರೇಗೌಡ ಚಾರಿಟಬಲ್ ಟ್ರಸ್ಟ್ ಉದ್ಘಾಟಿಸಿ ಅವರು ಮಾತನಾಡಿದರು.

ಹಿರಿಯರು, ಅನುಭವಿ ರಾಜಕಾರಣಿಗಳು ರಾಜಕೀಯ ಕ್ಷೇತ್ರದ ಹಿರಿಮೆ-ಗರಿಮೆ ಎತ್ತಿ ಹಿಡಿಯುವಂತೆ ಅಧಿಕಾರ ನಡೆಸಿದ್ದರು. ಅವರ ಹಾದಿಯಲ್ಲಿ ನಡೆದುಬಂದಿರುವ ನಾವು ಮುಂದಿನವರಿಗೆ ಒಳ್ಳೆಯ ಮಾರ್ಗದರ್ಶಕರಾಗಬೇಕು. ಆದರೆ, ಕೆಲವರು ರಾಜಕೀಯವಾಗಿ ನಡೆದುಕೊಳ್ಳುತ್ತಿರುವ ರೀತಿ ಅಸಹ್ಯ ಹುಟ್ಟಿಸುವಂತಿದೆ. ಅಭಿವೃದ್ಧಿಗೆ ಅಡ್ಡಗಾಲು ಹಾಕುವುದು, ಒಳ್ಳೆಯ ಕೆಲಸಗಳಿಗೆ ತೊಂದರೆ ನೀಡುವುದು, ಅಸಭ್ಯವಾಗಿ ನಿಂದಿಸುತ್ತಾ ಮಾನಸಿಕವಾಗಿ ಕುಗ್ಗಿಸುವ ಕೆಲಸ ಮಾಡುತ್ತಿದ್ದಾರೆ. ಅದಕ್ಕಾಗಿ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ರಾಜಕಾರಣ ಪ್ರವೇಶಿಸುವ ಮೂಲಕ ಮತ್ತೆ ಒಳ್ಳೆಯ ರಾಜಕೀಯ ವ್ಯವಸ್ಥೆ ನಿರ್ಮಾಣ ಮಾಡುವ ಕೆಲಸ ಆಗಬೇಕಿದೆ ಎಂದರು.

ಕೊರೋನಾ ಸಮಯದಲ್ಲಿ ಎಲ್ಲ ವರ್ಗದ ಜನರು ಸಂಕಷ್ಟ-ಸವಾಲುಗಳನ್ನು ಎದುರಿಸಿದ್ದಾರೆ. ಈ ಸಂಕಷ್ಟ ಸನ್ನಿವೇಶದಲ್ಲಿ ಆಶಾ ಕಾರ್ಯಕರ್ತೆಯರು ಸಲ್ಲಿಸಿದ ಸೇವೆ ಶ್ಲಾಘನೀಯ. ಅವರ ಶ್ರಮದ ಪರಿಣಾಮ ಸಾವಿರಾರು ಜನರು ಚೇತರಿಸಿಕೊಂಡಿದ್ದಾರೆ ಎಂದು ನುಡಿದರು.

ಶ್ರೀ ಆದಿಚುಂಚನಗಿರಿ ಪೀಠಾಧ್ಯಕ್ಷ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಮಾತನಾಡಿ, ಸಮಾಜಕ್ಕೆ ಸೇವೆ ಸಲ್ಲಿಸುವವರ ಹೆಸರು ಸದಾಕಾಲ ಜನಮಾನಸದಲ್ಲಿ ಚಿರಸ್ಥಾಯಿಯಾಗಿ ಉಳಿಯುತ್ತದೆ ಎಂದರು.

ಪ್ರಪಂಚದಲ್ಲಿ ಕೋಟ್ಯಂತರ ಜನ ಹುಟ್ಟುತ್ತಾರೆ, ಸಾಯುತ್ತಾರೆ. ಎಲ್ಲರ ಹೆಸರು ಅಜರಾಮರವಾಗುವುದಿಲ್ಲ. ಸಮಾಜಕ್ಕೆ ನಿಸ್ವಾರ್ಥವಾಗಿ ಸೇವೆ ಸಲ್ಲಿಸುವವರು ಹೆಸರು ಮಾತ್ರ ಶಾಶ್ವತವಾಗಿ ಉಳಿಯುತ್ತದೆ ಎಂದರು.

ಕಷ್ಟದಲ್ಲಿರುವವರಿಗೆ ನೆರವಾಗುವುದು ಮಾನವೀಯ ಧರ್ಮ. ತಂದೆ-ತಾಯಿಗಳು ಮಾಡಿದ ಪುಣ್ಯದ ಕೆಲಸಗಳನ್ನು ಮಕ್ಕಳು ಮುಂದುವರೆಸಿಕೊಂಡು ಹೋದರೆ ಹೆತ್ತವರ ಆತ್ಮಕ್ಕೆ ಚಿರಶಾಂತಿ ಸಿಗುತ್ತದೆ ಎಂದು ನುಡಿದರು.

ಕೊರೋನಾ ಎರಡನೇ ಅಲೆ ಮುಗಿದಿದೆ ಎಂದು ಮೈಮರೆಯಬೇಡಿ. ಮೂರನೇ ಅಲೆಯ ಆತಂಕ ಇನ್ನೂ ಇದೆ. ಅದು ಎದುರಾಗದಂತೆ ತಡೆಯಲು ಪ್ರತಿಯೊಬ್ಬರೂ ಲಸಿಕೆಯನ್ನು ತಪ್ಪದೇ ಪಡೆಯಬೇಕು. ಯಾರೂ ಕೂಡ ಲಸಿಕೆ ಪಡೆಯುವುದಕ್ಕೆ ಭಯಪಡಬಾರದು. ಹಿಂದೆ ಸರಿಯಬಾರದು ಎಂದು ನುಡಿದರು.

ಯುವ ಮುಖಂಡ ಎಸ್. ಸಚ್ಚಿದಾನಂದ ಮಾತನಾಡಿ, ಎನ್. ಶಂಕರೇಗೌಡ ಟ್ರಸ್ಟ್‌ನ ಎರಡು ಮುಖ್ಯ ಯೋಜನೆಗಳೆಂದರೆ ಆಸರೆ ಮತ್ತು ಆರೈಕೆ. ಶ್ರೀರಂಗಪಟ್ಟಣ ವಿಧಾನಸಭಾ ಕ್ಷೇತ್ರದಲ್ಲಿ ಯಾವುದೇ ಬಡಕುಟುಂಬದ ಹೆಣ್ಣು ಮಗಳು ಋತುಮತಿಯಾದರೆ ಆ ಹೆಣ್ಣುಮಗಳ ಆರೈಕೆಗಾಗಿ ಸುಮಾರು 8 ಸಾವಿರ ರು. ಮೌಲ್ಯದ ಪೌಷ್ಠಿಕ ಆಹಾರ ಹಾಗೂ ಶುಚಿತ್ವ ಸಾಮಗ್ರಿಗಳನ್ನು ಒಳಗೊಂಡ ವಿಶೇಷ ಆರೈಕೆ ಕಿಟ್ ನೀಡಲಾಗುವುದು. ಅದೇ ರೀತಿ ಆಸರೆ ಯೋಜನೆಯಡಿ ಕ್ಷೇತ್ರದ ಯಾವುದೇ ಬಡಕುಟುಂಬದಲ್ಲಿ ಮರಣ ಸಂಭವಿಸಿದರೆ ಮೃತ ವ್ಯಕ್ತಿಯ ಅಂತ್ಯಸಂಸ್ಕಾರಕ್ಕಾಗಿ ಟ್ರಸ್ಟ್ ಮೂಲಕ 5 ಸಾವಿರ ರು. ಆರ್ಥಿಕ ನೆರವು ನೀಡಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ಆದಿಚುಂಚನಗಿರಿ ಕೊಮ್ಮೇರಹಳ್ಳಿ ಶಾಖಾ ಮಠದ ಶ್ರೀ ಪುರುಷೋತ್ತಮಾನಂದನಾಥ ಸ್ವಾಮೀಜಿ, ಮಾಜಿ ಶಾಸಕ ಹೆಚ್.ಬಿ.ರಾಮು, ಜಿಪಂ ಸದಸ್ಯ ತೂಬಿನಕೆರೆ ರಾಮಲಿಂಗಯ್ಯ ತಮಿಳುನಾಡಿನ ಸಮಾಜಸೇವಕ ಆರ್ಮುಗಂ ಸ್ವಾಮಿ, ಎಸ್.ಎಲ್.ಲಿಂಗರಾಜು, ಲಕ್ಷ್ಮಮ್ಮ, ಹೆಮ್ಮಿಗೆ ಸಿದ್ದಪ್ಪ, ಬೇಲೂರು ಸೋಮಶೇಖರ್, ಯೋಗಾನಂದ ಪಟೇಲ್, ನಯನಾ ಇತರರಿದ್ದರು.

# ಬೆಲೆ ಏರಿಕೆ ಖಂಡಿಸಿ ಧರಣಿ




ಮಂಡ್ಯ : ಅಡುಗೆ ಅನಿಲ ಸೇರಿದಂತೆ ಅಗತ್ಯ ವಸ್ತುಗಳ ಬೆಲೆಯನ್ನು ಇಳಿಕೆ ಮಾಡಬೇಕೆಂದು ಒತ್ತಾಯಿಸಿ ಭಾರತ ಪ್ರಜಾಸತ್ತಾತ್ಮಕ ಯುವಜನ ಫೆಡರೇಷನ್ (ಡಿವೈಎಫ್‌ಐ)ನಿಂದ ಪ್ರತಿಭಟನೆ ನಡೆಸಲಾಯಿತು.

ಕರೊನಾ ಸೋಂಕು ಜನಸಾಮಾನ್ಯರ ಬದುಕನ್ನು ಕಸಿದುಕೊಂಡಿರುವ ಇಂತಹ ಪರಿಸ್ಥಿತಿಯಲ್ಲಿ ಕೇಂದ್ರ ಸರ್ಕಾರ ಅಗತ್ಯ ವಸ್ತುಗಳ ಬೆಲೆ ಏರಿಕೆ ಮಾಡುತ್ತಿರುವುದು ಸರಿಯಲ್ಲ. ಪೆಟ್ರೋಲ್, ಡೀಸೆಲ್, ಆಹಾರ ಧಾನ್ಯ, ಎಲ್‌ಜಿಪಿ ಗ್ಯಾಸ್, ಅಡುಗೆ ಎಣ್ಣೆಯ ಬೆಲೆ ನಿರಂತರವಾಗಿ ಏರಿಕೆಯಾಗುತ್ತಿದೆ. ಇದು ಗ್ರಾಹಕರಿಗೆ ದೊಡ್ಡ ಮಟ್ಟದಲ್ಲಿಯೇ ಹೊರೆಯಾಗುತ್ತಿದೆ. ಉಜ್ವಲ ಯೋಜನೆಯಡಿ ಬಡಜನರಿಗೆ ಉಚಿತ ಗ್ಯಾಸ್ ಸಂಪರ್ಕ ನೀಡುವುದಾಗಿ ಪ್ರಚಾರ ಪಡೆದ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಅನಿಲ ಕಂಪನಿಗಳಿಗೆ ಮಾರುಕಟ್ಟೆ ವಿಸ್ತರಿಸಿದರೇ ಹೊರತು ಜನರಿಗೆ ಯಾವ ಲಾಭವೂ ಆಗಲಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು. ಚುನಾವಣಾ ತಹಸೀಲ್ದಾರ್ ಮನವಿ ಸ್ವೀಕರಿಸಿದರು.

ಪ್ರತಿಭಟನೆಯಲ್ಲಿ ಚಂದ್ರ, ಗುರುಸ್ವಾಮಿ, ಚಂದ್ರು, ಭಗತ್, ಶಿವಕುಮಾರ್, ಪ್ರದೀಪ್, ಹೇಮಂತ್‌ಕುಮಾರ್ ಇದ್ದರು.

## ಇಂದು ವನಮಹೋತ್ಸವ

ಮಂಡ್ಯ : ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್ ಸಾಮಾಜಿಕ ಅರಣ್ಯ ವಿಭಾಗ ಮಂಡ್ಯ, ಶ್ರೀರಂಗಪಟ್ಟಣ ವಲಯ ಅರಣ್ಯ, ತಾಲ್ಲೂಕು ಪಂಚಾಯತ್,ಗ್ರಾಮ ಪಂಚಾಯತಿ, ಇಕೋ ಕ್ಲಬ್. ಕೆಆರ್‌ಎಸ್ ರೋಟರಿ ಕ್ಲಬ್, ನೇಗಿಲ ಯೋಗಿ ಟ್ರಸ್ಟ್, ಅನನ್ಯ ಹಾರ್ಟ್ ಸಂಸ್ಥೆ, ಮಂಡ್ಯ ಜನನಿ ಸಂಸ್ಥೆ ಇವರ ಸಂಯುಕ್ತಶ್ರಯದಲ್ಲಿ ಜುಲೈ 8ರಂದು ಬೆಳಿಗ್ಗೆ ಶ್ರೀರಂಗಪಟ್ಟಣ ತಾಲ್ಲೂಕಿನ ಕೆ.ಆರ್.ಎಸ್ ಗ್ರಾಮದ ಕಾಲೇಜು ಮುಂಭಾಗ ವನಮಹೋತ್ಸವ 2021 ರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಶಾಸಕ ರವೀಂದ್ರ ಶ್ರೀಕಂಠಯ್ಯ, ಶ್ರೀರಂಗಪಟ್ಟಣ ತಹಶಿಲ್ದಾರರಾದ ರೂಪ, ಜಿಲ್ಲಾ ಅರಣ್ಯಾಧಿಕಾರಿ ವೆಂಕಟೇಶ, ತಾಲ್ಲೂಕು ಕಾರ್ಯನಿರ್ವಾಹಕ ಅಧಿಕಾರಿ ಭೈರಪ್ಪ, ಹಾಗೂ ಇತರೆ ಗಣ್ಯರು ಭಾಗವಹಿಸಲಿದ್ದಾರೆ ಎಂದು ಕಾರ್ಯಕ್ರಮ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಂಸದೆ ಸುಮಲತಾ ವಿರುದ್ಧ ಜೆಡಿಎಸ್ ಪ್ರತಿಭಟನೆ



ಮಂಡ್ಯ : ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಅವರ ಬಗ್ಗೆ ಸಂಸದೆ ಸುಮಲತಾ ಅಂಬರೀಷ್ ಲಘುವಾಗಿ ಮಾತನಾಡಿದ್ದಾರೆಂದು ಜೆಡಿಎಸ್ ಮುಖಂಡರು ಹಾಗೂ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಜಿಪಂ ಮಾಜಿ ಅಧ್ಯಕ್ಷ ತಗ್ಗಹಳ್ಳಿ ವೆಂಕಟೇಶ್, ನಿರಂತರವಾಗಿ ಜನಸೇವೆ ಮಾಡುತಿರುವ ಎಚ್‌ಡಿಕೆ ಅವರ ಬಗ್ಗೆ ಸಂಸದೆ ತುಚ್ಛವಾಗಿ ಮಾತನಾಡುತ್ತಿರುವುದು ಖಂಡನೀಯ. ಅವರ ಬಗ್ಗೆ ಮಾತನಾಡುವಷ್ಟು ದೊಡ್ಡವರಲ್ಲ. ಅನುಕಂಪದ ಅಲೆಯಲ್ಲಿ ಹಾಗೂ ಆಕಸ್ಮಿಕವಾಗಿ ಲೋಕಸಭಾ ಸದಸ್ಯ ಸ್ಥಾನ ಸಿಕ್ಕಿದೆ. ಆದರೆ ಅದನ್ನು ಸಮರ್ಥವಾಗಿ ನಿಬಾಯಿಸಲು ಸಾಧ್ಯವಾಗದೇ ಜನರಲ್ಲಿ ತಪ್ಪು ಅಭಿಪ್ರಾಯ ಮೂಡಿಸುವಂತಹದ್ದು ಸರಿಯಲ್ಲ ಎಂದರು.

ಕೆಆರ್‌ಎಸ್ ಬಗ್ಗೆ ಸುಳ್ಳು ಪ್ರಚಾರ ಮಾಡುವ ಮೂಲಕ ಜನರ ದಿಕ್ಕು ತಪ್ಪಿಸುವ ಹಾಗೂ ಆತಂಕ ಸೃಷ್ಠಿಸುವ ಕೆಲಸ ಮಾಡುತ್ತಿದ್ದಾರೆ. ಜಿಲ್ಲೆಯ ಅಭಿವೃದ್ಧಿ ಕಡೆ ಗಮನಕೊಟ್ಟಿಲ್ಲ ಹಾಗೂ ಕೋವಿಡ್ ಸಂದರ್ಭದಲ್ಲಿಯೂ ಜಿಲ್ಲೆಗೆ ಬಂದಿಲ್ಲ. ಈ ಹಿನ್ನೆಲೆಯಲ್ಲಿ ಜನರ ಗಮನ ಬೇರೆಡೆ ಸೆಳೆಯಲು ಡ್ಯಾಂ ಹಾಗೂ ಗಣಿಗಾರಿಕೆ ಬಗ್ಗೆ ಮಾತನಾಡುತ್ತಿದ್ದಾರೆ. ಒಂದು ವೇಳೆ ಅಕ್ರಮ ಗಣಿಗಾರಿಕೆ ನಡೆಯುತ್ತಿದ್ದರೆ, ಪತ್ತೆ ಮಾಡಿಸಿ ಶಿಕ್ಷೆ ಕೊಡಿಸುವ ಕೆಲಸ ಮಾಡಲಿ ಎಂದರು.

ಪ್ರತಿಭಟನೆಯಲ್ಲಿ ಡಿಸಿಸಿ ಬ್ಯಾಂಕ್ ನಿರ್ದೇಶಕ ಕಾಳೇಗೌಡ, ನವೀನ್ ಇತರರಿದ್ದರು.

## ಹಿಂಬಡ್ತಿ ನೀಡಿರುವುದನ್ನು ವಿರೋಧಿಸಿ ಪ್ರತಿಭಟನೆ

ಮಳವಳ್ಳಿ : 1 ರಿಂದ 7ನೇ ತರಗತಿ ಶಿಕ್ಷಕರಾಗಿ ನೇಮಕವಾಗಿದ್ದ ಶಿಕ್ಷಕರನ್ನು 1ರಿಂದ 5ನೇ ತರಗತಿಯ ಶಿಕ್ಷಕರೆಂದು ಹಿಂಬಡ್ತಿ ನೀಡಿರುವುದನ್ನು ಖಂಡಿಸಿ ಕರ್ನಾಟಕ ರಾಜ್ಯ ಸರ್ಕಾರಿ ಪ್ರಾಥಮಿಕ ಶಾಲಾ ಪದವೀಧರ ಶಿಕ್ಷಕರ ಸಂಘದ ಸದಸ್ಯರು ಪಟ್ಟಣದ ಕ್ಷೇತ್ರ ಶಿಕ್ಷಣಾಧಿಕಾರಿ ಕಚೇರಿ ಮುಂದೆ ಪ್ರತಿಭಟನೆ ನಡೆಸಿದರು.

ಪ್ರತಿಭಟನೆಯನ್ನುದ್ದೇಶಿಸಿ ಸಂಘದ ತಾಲ್ಲೂಕು ಘಟಕದ ಅಧ್ಯಕ್ಷ ಜಿ.ಎನ್.ಮಲ್ಲೇಶ್ ಮಾತನಾಡಿ, ಕಳೆದ ಒಂದೂವರೆ ವರ್ಷದಿಂದ ಹಿಂಬಡ್ತಿ ಮಾಡಿರುವುದನ್ನು ವಿರೋಧಿಸಿ ವಿವಿಧ ರೀತಿಯಲ್ಲಿ ಪ್ರತಿಭಟನೆ ನಡೆಸುತ್ತಾ ಬಂದಿದ್ದು, ಸಮಸ್ಯೆ ಬಗೆಹರಿಸುವ ನೀಡಿದ್ದ ಭರವಸೆ ಈಡೇರಿಲ್ಲ. ಸದ್ಯದಲ್ಲಿಯೇ ಬೇಡಿಕೆಗಳನ್ನು ಈಡೇರಿಕೆ ಮಾಡದಿದ್ದರೆ ಮುಂದಿನ ದಿನಗಳಲ್ಲಿ 6ರಿಂದ 8ನೇ ತರಗತಿ ಬೋಧನೆಯನ್ನು ಬಹಿಷ್ಕಾರ ಮಾಡುವುದಾಗಿ ಎಚ್ಚರಿಕೆ ನೀಡಿದರು.

ರಾಜ್ಯ ಸರ್ಕಾರಿ ನೌಕರರ ಸಂಘದ ತಾಲ್ಲೂಕು ಘಟಕದ ಅಧ್ಯಕ್ಷ ಮಲ್ಲಿಕಾರ್ಜುನಯ್ಯ ಮಾತನಾಡಿ, ಶಿಕ್ಷಕರ ಸಮಸ್ಯೆ ಬಗೆಹರಿಸುವ ನಿಟ್ಟಿನಲ್ಲಿ ಸಂಘದ ರಾಜ್ಯ ಘಟಕದ ಅಧ್ಯಕ್ಷ ಸಿ.ಎಸ್.ಷಡಾಕ್ಷರಿ ನೇತೃತ್ವದಲ್ಲಿ ತಂಡವೊಂದು ಮುಖ್ಯಮಂತ್ರಿಗಳು ಹಾಗೂ ಸಂಬಂಧಪಟ್ಟ ಸಚಿವರನ್ನು ಭೇಟಿ ಮಾಡಿ ಚರ್ಚೆ ನಡೆಸಿದ್ದು, ಮುಂದಿನ ದಿನಗಳಲ್ಲಿ ಪ್ರತಿಭಟನೆ ನಡೆಸಲಾಗುವುದು ಎಂದರು.

ರಾಜ್ಯ ಸರ್ಕಾರಿ ನೌಕರರ ಒಕ್ಕೂಟದ ತಾಲ್ಲೂಕು ಘಟಕದ ಕಾರ್ಯದರ್ಶಿ ಜಿ.ವಿ.ಶಿವಕುಮಾರ್ ಮಾತನಾಡಿ, ಒಕ್ಕೂಟದ ವತಿಯಿಂದ ಬಗೆಹರಿಸಲು ಸಾಕಷ್ಟು ಪ್ರಯತ್ನ ನಡೆಸಿದ್ದು, ಅಧಿಕಾರಿಗಳ ಭರವಸೆ ಬರೀ ಭರವಸೆಯಾಗಿಯೇ ಉಳಿದಿದೆ. ಕೂಡಲೇ ಸರ್ಕಾರ ನಮ್ಮ ಬೇಡಿಕೆಗಳನ್ನು ಈಡೇರಿಸಲಿ ಎಂದು ಒತ್ತಾಯಿಸಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಕಚೇರಿಯ ಸಿಬ್ಬಂದಿಯ ಮೂಲಕ ಶಿಕ್ಷಣ ಸಚಿವ ಸುರೇಶ್ ಕುಮಾರ್ ಅವರಿಗೆ ಮನವಿ ಸಲ್ಲಿಸಿದರು.

ಪ್ರತಿಭಟನೆಯಲ್ಲಿ ಹೇಮಾವತಿ, ದೇವರಾಜು ಕೊದೇನಕೊಪ್ಪಲು, ಎಂ.ಸಿ.ಚಲುವರಾಜು, ಎಂ.ಪಿ.ಶಿವಕುಮಾರ್, ಪಾಪಣ್ಣ ಸೇರಿದಂತೆ ನೂರಾರು ಶಿಕ್ಷಕರು ಭಾಗಿಯಾಗಿದ್ದರು.

ಪುಟ-2
ಕ್ರಾಂತಿಯಕಿಡಿ
ಗುರುವಾರ
08 ಜುಲೈ 2021
ಕಾಯಕಯೋಗಿ
KAYAKAYOGI-MORNING DAILY
ಕನ್ನಡ ದಿನಪತ್ರಿಕೆ




## ಅನಧಿಕೃತ ಕಟ್ಟಡ ತೆರವು ಕಾರ್ಯಾಚರಣೆ

ಮೈಸೂರು: ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ಸೇರಿದ ಜಾಗದಲ್ಲಿ ಅನಧಿಕೃತವಾಗಿ ನಿರ್ಮಿಸಲಾಗಿದ್ದ ಕಟ್ಟಡವನ್ನು ಬುಧವಾರ ಬೆಳಿಗ್ಗೆ ತೆರವುಗೊಳಿಸಲಾಯಿತು.

ಸೇರಿದ ಗೋಕುಲಂ 2ನೇ ಬಡಾವಣೆಯ ಸಂಖ್ಯೆ 41ರಲ್ಲಿ ಅನಧಿಕೃತವಾಗಿ ನಿರ್ಮಿಸಲಾಗಿದ್ದ ಕಟ್ಟಡವನ್ನು, ಪ್ರಾಧಿಕಾರದ ಆಯುಕ್ತರಾದ ಡಾ. ಡಿ.ಬಿ.ನಟೇಶ್ ಅವರ ನಿರ್ದೇಶನದಂತೆ ಜಯಲಕ್ಷ್ಮಿಪುರಂ ಪೊಲೀಸ್ ಠಾಣೆಯ ಸಿಬ್ಬಂದಿ ನೆರವಿನೊಂದಿಗೆ ನೆಲಸಮಗೊಳಿಸಿ ಪ್ರಾಧಿಕಾರದ ವಶಕ್ಕೆ ಪಡೆಯಲಾಯಿತು. ಸದರಿ ಕಟ್ಟಡದ ಅಂದಾಜು ಮೌಲ್ಯ 41 ಲಕ್ಷ ರೂ. ಇದೆ.

ತೆರವು ಕಾರ್ಯಾಚರಣೆ ವೇಳೆ ವಲಯ ಅಧಿಕಾರಿ ರವೀಂದ್ರ ಕುಮಾರ್, ಇಂಜಿನಿಯರ್ಗಳು ಸ್ಥಳದಲ್ಲಿ ಹಾಜರಿದ್ದರು.

## ಪ್ರಜ್ವಲ್ ಕೂಡ ದೇವೇಗೌಡರ ಪ್ರಾಡಕ್ಟ್. ಸುಮಲತಾ ವಿರುದ್ಧ ಭುಗಿಲೆದ್ದ ಆಕ್ರೋಶ

ಮಂಡ್ಯ: ಮಾಜಿ ಪ್ರಧಾನಿ ದೇವೇಗೌಡರ ಕುಟುಂಬವನ್ನ ಡಿವೈಡಂಡ್ ರೂಲ್ ಮಾಡುವ ಪ್ರಯತ್ನವನ್ನ ಸಂಸದೆ ಸುಮಲತಾ ಮಾಡ್ತಿದ್ದಾರೆ. ಇಂತಹ ನೀಚ ರಾಜಕಾರಣವನ್ನು ಈ ಹಿಂದೆ ಬ್ರಿಟಿಷರು ಮಾಡಿದ್ದರು. ಅದೇ ಕೆಲಸವನ್ನು ನೀವೀಗ ಮಾಡ್ತಿದ್ದೀರಾ. ಪ್ರಜ್ವಲ್ ರೇವಣ್ಣರನ್ನು ನೋಡಿ ಕಲಿಯಿರಿ ಎನ್ನುತ್ತೀರಲ್ಲಾ ಪ್ರಜ್ವಲ್ ಕೂಡ ದೇವೇಗೌಡರ ಪ್ರಾಡಕ್ಟ್ ಎಂದು ಸುಮಲತಾ ವಿರುದ್ಧ ಶ್ರೀರಂಗಪಟ್ಟಣ ಶಾಸಕ ರವೀಂದ್ರ ಶ್ರೀಕಂಠಯ್ಯ ಕಿಡಿಕಾರಿದ್ದಾರೆ.

ಸುಮಲತಾ ಮತ್ತು ಎಚ್.ಡಿ.ಕುಮಾರಸ್ವಾಮಿ ನಡುವಿನ ವಾಕ್ಸಮರ ತಾರಕಕ್ಕೇರಿದ್ದು, ಇದೀಗ ಎಚ್‌ಡಿಕೆ ಪರ ರವೀಂದ್ರ ಶ್ರೀಕಂಠಯ್ಯ ಬ್ಯಾಟಿಂಗ್ ಮಾಡಿದ್ದಾರೆ. ಮಂಡ್ಯ ಸಂಸದೆಯ ಹೇಳಿಕೆ ಖಂಡಿಸಿದ್ದಾರೆ. ನಮ್ಮ ಬಳಿ ಎಲ್ಲಾ ರೀತಿಯ ಮಿಸೈಲ್ಸ್ ಇವೆ. ಯಾರಿಗೆ ಯಾವ ಮಿಸೈಲ್, ನಿಮ್ಮ ಹೇಳಿಕೆಗಳಿಗೆ ಯಾವ ಮಿಸೈಲ್ ಬಿಡಬೇಕು ಎಂಬುದು ನಮಗೆ ಗೊತ್ತಿದೆ. ಜೆಡಿಎಸ್ ಪಕ್ಷದಲ್ಲಿ ಬೇಕಾದಷ್ಟು ಅಸ್ತ್ರಗಳಿವೆ. ನಮ್ಮ ಪಕ್ಷದ ಬಗ್ಗೆ ಹಗುರವಾಗಿ ಮಾತನಾಡಬೇಡಿ. ಕನ್ನಡ ಭಾಷೆಯ ಪಕ್ಷ ಜನಾತದಳ. ನೀವು ಜೆಡಿಎಸ್ ಪಕ್ಷವನ್ನು ನಿರ್ನಾಮ ಮಾಡಿ ಆಂಧ್ರದಿಂದ ಹೊಸ ಪಕ್ಷ ತರುವ ಪ್ರಯತ್ನ ಮಾಡ್ತಿದ್ದೀರಾ? ಇದೆಲ್ಲಾ ಇಲ್ಲಿ ನಡೆಯಲ್ಲ ಎಂದು ಎಚ್ಚರಿಸಿದರು.

ಕುಮಾರಸ್ವಾಮಿ ಬಗ್ಗೆ ಮಾತನಾಡುವಾಗ ಎಚ್ಚರಿಕೆ ಇರಲಿ. ನಿಮ್ಮಂತಹ ಸಾವಿರಾರು ಜನರನ್ನ ಜೆಡಿಎಸ್ ತಯಾರು ಮಾಡಿ ರಾಜಕೀಯಕ್ಕೆ ಬಿಟ್ಟಿದೆ. ನಿಮ್ಮ ಪತಿಯನ್ನು ಸೇರಿದ ಹಾಗೇ ಸಾವಿರಾರು ಜನರನ್ನ ತಯಾರು ಮಾಡಿದೆ. ಸಿನಿಮಾ ರಂಗದಿಂದ ರಾಜಕೀಯಕ್ಕೆ ಬಂದಿದ್ದೀರಾ. ನಿಮಗೆ ಇದರ ಬಗ್ಗೆ ತಿಳಿವಳಿಕೆ ಇಲ್ಲ. ನಮ್ಮ ನಾಯಕರ ಬಗ್ಗೆ ಮಾತನಾಡುವಾಗ ವಿವೇಕವಿರಲಿ. ನೀವಲ್ಲಾ ಮಂಡ್ಯ ಜನ, ನಾವು ಮೂಲ ಜನ. ಇಲ್ಲಿ ಹುಟ್ಟಿ ಬೆಳೆದಿರೋದು ನಾವು. ಮಂಡ್ಯ ಭಾಷೆ ಏನು? ಹೇಗೆ ಮಾತನಾಡಬೇಕು? ಎಂಬುದು ನಮಗೂ ಗೊತ್ತಿದೆ. ನಿಮಗೆ ನಿಮ್ಮ ಮಾತಿನ ಮೇಲೆ ಹಿಡಿತವಿರಲಿ, ಕುಮಾರಸ್ವಾಮಿಗೆ ತಲೆ ಕೆಟ್ಟಿದೆ ಎಂದ ನೀವು ಎಚ್ಡಿಕೆ ಬಳಿ ಕ್ಷಮೆ ಕೇಳಿ ಎಂದು ಆಗ್ರಹಿಸಿದರು. ಎರಡು ಬಾರಿ ಸಿಎಂ ಆದ ವ್ಯಕ್ತಿಗೆ ತಲೆಕೆಟ್ಟಿದೆ ಎಂದಿದ್ದೀರಲ್ಲಾ ಕೂಡಲೇ ಕ್ಷಮೆ ಕೇಳಬೇಕು ಎಂದರು.

ಕೆಆರ್‌ಎಸ್ ಡ್ಯಾಂ ಬಿರುಕು ವಿಚಾರವಾಗಿ ಮತ್ತೆ ಮಂಡ್ಯದಲ್ಲಿ ಮೂಲ ವಲಸಿಗ ಮಾತು ಸದ್ದು ಮಾಡುತ್ತಿದೆ.

## ಗೃಹಿಣಿ ಆತ್ಮಹತ್ಯೆ!

ಮೈಸೂರು: ವರದಕ್ಷಿಣೆ ಕಿರುಕುಳ ತಾಳಲಾರದೇ ಗೃಹಿಣಿಯೊಬ್ಬರು ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಬಿಳಿಗೆರೆಯಲ್ಲಿ ನಡೆದಿದೆ. ಸುತ್ತೂರು ಸಮೀಪದ ಬಿಳಿಗೆರೆ ನಿವಾಸಿ ಸೌಮ್ಯಾ (26) ನೇಣಿಗೆ ಶರಣಾದ ಗೃಹಿಣಿ.

ಈಕೆಯನ್ನು ಬಿಳಿಗೆರೆಯ ನಿವಾಸಿ ಗೌತಮ್ ಎಂಬಾತನಿಗೆ ಕಳೆದ ಮೂರು ವರ್ಷಗಳ ಹಿಂದೆ ವಿವಾಹ ಮಾಡಿಕೊಡಲಾಗಿತ್ತು. ಗೌತಮ್ ಕಾರು ಸರ್ವೀಸ್ ಸ್ಟೇಶನ್ ಇಟ್ಟುಕೊಂಡಿದ್ದ. ವಿವಾಹ ಸಂದರ್ಭದಲ್ಲಿ ಸೌಮ್ಯ ಪೋಷಕರು ನಾಲ್ಕು ಲಕ್ಷ ರೂ. ವರದಕ್ಷಿಣೆಯನ್ನು ನೀಡಿದ್ದರು. ಆದರೂ ಮನೆಯವರಿಗೆ ಇದರಿಂದ ತೃಪ್ತಿಯಾಗಿರಲಿಲ್ಲ. ಮತ್ತೆ ಮತ್ತೆ ವರದಕ್ಷಿಣೆ ತರುವಂತೆ ಕಿರುಕುಳ ನೀಡುತ್ತಿದ್ದರು. ಪತಿ ಮನೆಯವರ ಕಿರುಕುಳದಿಂದ ಮನನೊಂದ ಸೌಮ್ಯ ನೇಣಿಗೆ ಕೊರಳೊಡ್ಡಿದ್ದಾಳೆ ಎನ್ನಲಾಗಿದೆ.

ಸೌಮ್ಯ ಸಾವಿನ ನಂತರ ಆಕೆಯ ಪತಿ, ಅತ್ತೆ ಹಾಗೂ ಮಾವ ನಾಪತ್ತೆಯಾಗಿದ್ದಾರೆ. ಬಿಳಿಗೆರೆ ಠಾಣೆ ಪೊಲೀಸರು ಸ್ಥಳಕ್ಕಾಗಮಿಸಿ ಪರಿಶೀಲನೆ ನಡೆಸಿದ್ದು, ಗೌತಮ್ ಮತ್ತು ಆತನ ತಂದೆ-ತಾಯಿಯ ಶೋಧಕಾರ್ಯ ನಡೆಸಿದ್ದಾರೆ.

## ಕಾಣೆಯಾದವರ ಪತ್ತೆಗಾಗಿ

ಮಂಡ್ಯ : ಹೆಬ್ಬಕವಾಡಿ ಗ್ರಾಮದ ನಿವಾಸಿ ಕೆ.ಎನ್ ಕಾವ್ಯ(25) ಎಂಬ ಯುವತಿಯು ಕಳೆದ ಜೂನ್ 28 ರಂದು ಬೆಳಿಗ್ಗೆ 9 ಗಂಟೆಗೆ ಮನೆಯಿಂದ ಹೊರಹೋದವರು ಕಾಣೆಯಾಗಿರುತ್ತಾರೆ ಎಂದು ಮಂಡ್ಯ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿರುತ್ತದೆ.

ಕಾಣೆಯಾದ ಯುವತಿಯು 5 ಅಡಿ ಎತ್ತರವಿದ್ದು, ಎಣ್ಣೆಗೆಂಪು ಮೈ ಬಣ್ಣ, ದುಂಡು ಮುಖ ಹಾಗೂ ಧೃಡಕಾಯ ಶರೀರ ಹೊಂದಿರುತ್ತಾರೆ. ಕನ್ನಡ ಭಾಷೆ ಮಾತನಾಡುತ್ತಾರೆ.ಕಾಣೆಯಾದ ದಿನದಂದು ಅರಿಶಿನ ಬಣ್ಣದ ಚೂಡಿದಾರ್ ಧರಿಸಿರುತ್ತಾರೆ.

ಇವರ ಸುಳಿವು ಸಿಕ್ಕಲ್ಲಿ ಜಿಲ್ಲಾ ಪೊಲೀಸ್ ನಿಯಂತ್ರಣ ಕೊಠಡಿ ದೂ.ಸಂ: 08232-224200 ಅಥವಾ ಜಿಲ್ಲಾ ಗ್ರಾಮಾಂತರ ಪೊಲೀಸ್ ಠಾಣೆ ಮೊ.ಸಂ: 9480804847 ಗೆ ಸಂಪರ್ಕಿಸಬೇಕೆಂದು ಮಂಡ್ಯ ಗ್ರಾಮಾಂತರ ಪೊಲೀಸ್ ಠಾಣೆಯ ಠಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯಾರ್ಥಿಗಳ ಸ್ವಯಂ ಅಧ್ಯಯನಕ್ಕಾಗಿ ಎಸ್‌ಎಸ್‌ಎಲ್‌ಸಿ ಮಿತ್ರ ಎಂಬ ಶೈಕ್ಷಣಿಕ ಮೊಬೈಲ್ ಆಪ್

ಮಂಡ್ಯ : ಮಂಡ್ಯದ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ವತಿಯಿಂದ ಕೋವಿಡ್-19 ಸಾಂಕ್ರಾಮಿಕ ನಿಯಂತ್ರಿಸುವ ಸಲುವಾಗಿ ಶಾಲೆಗಳಿಗೆ ವಿದ್ಯಾರ್ಥಿಗಳು ಭೌತಿಕವಾಗಿ ಹಾಜರಾಗಲು ಸಾಧ್ಯವಾಗದ ಕಾರಣ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳು ಸ್ವಯಂ ಅಧ್ಯಯನ ಮಾಡಲು ಅನುಕೂಲವಾಗುವಂತೆ ಎಸ್.ಎಸ್.ಎಲ್.ಸಿ ಮಿತ್ರ" ಎಂಬ ಶೈಕ್ಷಣಿಕ ಮೊಬೈಲ್ ಆಪ್ ಅನ್ನು ಅಭಿವೃದ್ಧಿಪಡಿಸಲಾಗಿರುತ್ತದೆ. ಸದರಿ ಆಪ್ನಲ್ಲಿ 6 ವಿಷಯಗಳ ಎಲ್ಲಾ ಘಟಕಗಳಿಗೂ ಲಭ್ಯವಿರುವ ವಿಡಿಯೋ ಪಾಠಗಳು, ಸಂವೇದ ತರಗತಿಗಳು, ಆನ್ಲೈನ್ ಕ್ವಿಜ್, ಪ್ರಶ್ನೆಕೋಶ, ಇತರೆ ಎಲ್ಲಾ ಇ- ಸಂಪನ್ಮೂಲಗಳನ್ನು ಒಂದೇ ಸೂರಿನಡಿ ಒದಗಿಸುವ ಸದುದ್ದೇಶದಿಂದ "ಎಸ್.ಎಸ್.ಎಲ್.ಸಿ ಮಿತ್ರ" ಎಂಬ ಶೈಕ್ಷಣಿಕ ಮೊಬೈಲ್ ಆಪ್ ಅನ್ನು ಅಭಿವೃದ್ಧಿಪಡಿಸಲಾಗಿರುತ್ತದೆ.

ಇದು ಪ್ರಸ್ತುತ ನಡೆಯುತ್ತಿರುವ ಎಸ್.ಎಸ್.ಎಲ್.ಸಿ ಪರೀಕ್ಷಾ ಸಿದ್ಧತೆಯ ದೃಷ್ಟಿಯಿಂದ ಬಹಳ ಉಪಯುಕ್ತವಾಗಿದ್ದು, ರಾಜ್ಯದ ಎಲ್ಲಾ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳು ಇದರ ಸದುಯೋಗ ಪಡೆದುಕೊಂಡು ಉತ್ತಮ ಅಂಕ ಗಳಿಸಲು ತಿಳಿಸಿದೆ. ಆಪ್ ಡೌನ್‌ಲೋಡ್ ಮಾಡಿಕೊಳ್ಳಲು https://dietmandya.in/sslcmithra/ ಲಿಂಕನ್ನು ಬಳಸುವುದು ಎಂದು ಮಂಡ್ಯ ಡಯಟ್ ನ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದಸ್ದಾರೆ.

## ಅಸಂಘಟಿತ ಕಾರ್ಮಿಕರಿಗೆ ಸಹಾಯಧನವನ್ನು ನೀಡಲು ಅರ್ಜಿ ಅಹ್ವಾನ

ಮಂಡ್ಯ : ಲಾಕ್‌ಡೌನ್ ಹಿನ್ನಲೆಯಲ್ಲಿ ದೈನಂದಿನ ಉದ್ಯೋಗವನ್ನು ನಡೆಸಲಾಗದೆ ಆದಾಯವನ್ನು ಕಳೆದುಕೊಂಡಿರುವ 11 ವರ್ಗಗಳ ಅಸಂಘಟಿತ ಕಾರ್ಮಿಕರಿಗೆ 2000 ರೂ ಗಳಂತೆ ಸಹಾಯಧನವನ್ನು ನೀಡಲು ಅಗತ್ಯ ದಾಖಲಾತಿಗಳೊಂದಿ ಅರ್ಜಿ ಅಹ್ವಾನಿಸಲಾಗಿದೆ.

ಅಸಂಘಟಿತ ಕಾರ್ಮಿಕರಾದ ಅಗಸರು, ಕ್ಷೌರಿಕರು, ಗೃಹಕಾರ್ಮಿಕರು, ಮೆಕಾನಿಕ್, ಚಿಂದಿ ಆಯುವವರು, ಹಮಾಲರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು ಹಾಗೂ ಭಟ್ಟಿ ಕಾರ್ಮಿಕ ವೃತ್ತಿಯಲ್ಲಿ ತೊಡಗಿರುವವರು ಅರ್ಹರಾಗಿದ್ದು, ಉದ್ಯೋಗ ದೃಢೀಕರಣ ಪ್ರಮಾಣ ಪತ್ರದೊಂದಿಗೆ http://serviceonline.gov.in/karnataka/ ಪೋರ್ಟಲ್‌ನಲ್ಲಿ ಜುಲೈ 31 ರೊಳಗೆ ಅರ್ಜಿ ಸಲ್ಲಿಸಬಹುದಾಗಿದೆ. ಮಾಹಿತಿಗಾಗಿ ಕಾರ್ಮಿಕ ಸಹಾಯವಾಣಿ ಸಂಖ್ಯೆ 155214 ಗೆ ಸಂಪರ್ಕಿಸಬಹುದೆಂದು ಮಂಡ್ಯ ಜಿಲ್ಲೆಯ ಕಾರ್ಮಿಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪೌರ ಕಾರ್ಮಿಕರ ಹಿತರಕ್ಷಣೆಗೆ ಹೆಚ್ಚಿನ ಒತ್ತು

## ಅಧಿಕಾರಿಗಳೊಂದಿಗೆ ಸಭೆ ನಡೆಸಿ ಕೋಟೆ ಎಂ.ಶಿವಣ್ಣ

ಚಾಮರಾಜನಗರ : ಪೌರ ಕಾರ್ಮಿಕರ ಹಿತರಕ್ಷಣೆಗೆ ಹೆಚ್ಚಿನ ಒತ್ತು ನೀಡಲಾಗಿದ್ದು ಅವರ ಆರೋಗ್ಯ ಸುರಕ್ಷತೆಗೆ ಹೆಚ್ಚು ಗಮನಹರಿಸಲಾಗಿದೆ ಎಂದು ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗದ ಅಧ್ಯಕ್ಷ ಎಂ. ಶಿವಣ್ಣ (ಕೋಟೆ) ಅವರು ತಿಳಿಸಿದರು.

ಅವರು ನಗರದ ಜಿಲ್ಲಾಧಿಕಾರಿ ಸಭಾಂಗಣದಲ್ಲಿ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರ ಕಾರ್ಮಿಕರಿಗೆ ಕೋವಿಡ್-19 ಹಿನ್ನೆಲೆಯಲ್ಲಿ ಕೈಗೊಂಡಿರುವ ಕ್ರಮದ ಬಗ್ಗೆ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಸುದ್ದಿಗೋಷ್ಟಿಯಲ್ಲಿ ಮಾತನಾಡಿದರು.

ಪೌರ ಕಾರ್ಮಿಕರು ಹಗಲಿರುಳು ಸ್ವಚ್ಚತೆಗಾಗಿ ಶ್ರಮಿಸುತ್ತಿದ್ದು ಅವರ ಕಾಳಜಿ ನಮ್ಮ ಗುರಿಯಾಗಿದೆ. ಕೊರೊನಾ ಸಂಕಷ್ಟದ ಸಂದರ್ಭದಲ್ಲಿಯೂ ಜೀವದ ಹಂಗು ತೊರೆದು ಕೆಲಸ ಮಾಡುತ್ತಿದ್ದಾರೆ. ಅವರ ಕುಂದುಕೊರತೆಗಳನ್ನು ಖುದ್ದು ಆಲಿಸಿದ್ದು ಸಮಸ್ಯೆಗಳ ನಿವಾರಣೆ ಬಗ್ಗೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದರು.

ಪೌರ ಕಾರ್ಮಿಕರಿಗೆ ಉಪಹಾರಕ್ಕಾಗಿ ನೀಡುತ್ತಿರುವ 20 ರೂ.ಸಾಲುವುದಿಲ್ಲ ಬದಲಿಗೆ ಅವರಿಗೆ ಗುಣಮಟ್ಟದ ಉಪಹಾರ ವಿತರಣೆಗೆ 50 ರೂ ನೀಡಬೇಕೆಂದು ಸರ್ಕಾರಕ್ಕೆ ಮನವಿ ಸಲ್ಲಿಸಲಾಗುವುದು. ಸ್ಥಳೀಯ ಸಂಸ್ಥೆಗಳಲ್ಲಿ ಅಧಿಕಾರಿಗಳು ಇರುವಂತಹ ಅನುದಾನದಲ್ಲಿ ಉಪಹಾರಕ್ಕೆ 50 ರೂ ನೀಡುವಂತೆ ಸಭೆಯಲ್ಲಿ ತಾಕೀತು ಮಾಡಿದ ಅಧ್ಯಕ್ಷರು ಪೌರಕಾರ್ಮಿಕರಿಗೆ ಸುರಕ್ಷತಾ ಧಿರಿಸು, ಅಗತ್ಯ ಸಲಕರಣೆಗಳು ,ಕುಡಿಯುವ ನೀರು ಸೇರಿದಂತೆ ಸರ್ಕಾರದ ಸೌಲಭ್ಯಗಳನ್ನು ಕಲ್ಪಿಸಬೇಕೆಂದು ತಿಳಿಸಿದರು.

ಚಾಮರಾಜನಗರ ಪಟ್ಟಣದ 31 ವಾರ್ಡ್ ಗಳ ಪೈಕಿ ಪೌರ ಕಾರ್ಮಿಕರಿಗೆ ಆಯ್ದ 3 ಕಡೆ ವಿಶ್ರಾಂತ ಗೃಹಗಳನ್ನು ನಿರ್ಮಿಸುವಂತೆಯೂ ಸೂಚಿಸಿದರು. ಮ್ಯಾನುವಲ್ ಸ್ಕ್ಯಾವೆಂಜರ್ ನಿಷೇಧವಾಗಿದ್ದು ಕಂಡುಬಂದರೆ ಅಗತ್ಯ ಕ್ರಮವಹಿಸುವುದಾಗಿ ತಿಳಿಸಿದರು. ಪೌರಕಾರ್ಮಿಕರನ್ನು ತಾತ್ಸಾರ ಮಾಡಿ ಕಡೆಗಣಿಸದೆ ಮಾನವೀಯತೆ ದೃಷ್ಟಿಯಿಂದ ಅವರ ಸೇವೆಯನ್ನು ಗೌರವಿಸುವಂತಾಗಬೇಕು ಎಂದರು.



ಆಕ್ಸಿಜನ್ ದುರಂತದಲ್ಲಿ ಮೃತಪಟ್ಟ ಕುಟುಂಬಗಳಿಗೆ ಸರ್ಕಾರ ಕನಿಷ್ಠ 5 ಲಕ್ಷರೂ ಆದರೂ ನೀಡಬೇಕು.ಈ ಬಗ್ಗೆ ತಾವು ಕೂಡ ಮುಖ್ಯ ಮಂತ್ರಿಗಳ ಬಳಿ ಮನವಿ ಸಲ್ಲಿಸಲಾಗುವುದು ಎಂದು ತಿಳಿಸಿದರು.

ಮಂತ್ರಿಯಾಗಿ ಕೆಲಸ ಮಾಡಿ ಅನುಭವ ಇರುವ ತಮಗೆ ಮೈಸೂರು ಭಾಗದಲ್ಲಿ ಬಿಜೆಪಿ ಅಧ್ಯಕ್ಷನಾಗಿ ಕೆಲಸ ಮಾಡಿದ್ದನ್ನು ಗುರುತಿಸಿ ಮುಖ್ಯಮಂತ್ರಿಗಳು ಪೌರ ಕಾರ್ಮಿಕರ ಸೇವೆ ಮಾಡುವ ಅವಕಾಶ ಕಲ್ಪಿಸಿದ್ದಾರೆ ಎಂದು ತಿಳಿಸಿದರು. ಸಭೆಯಲ್ಲಿ ನಗರಸಭೆ ಅಧ್ಯಕ್ಷೆ ಆಶಾ,ಉಪಾಧ್ಯಕ್ಷೆ ಸುಧಾ, ಜಿ.ಪಂ ಸಿಇಒ ಎಚ್.ಬಿ.ನಾರಾಯಣ ರಾವ್, ನಗರಸಭೆ ಪೌರಾಯುಕ್ತ ಕರಿಬಸವಯ್ಯ ಸೇರಿದಂತೆ ಇತರರಿದ್ದರು.

## ಶಿವಮೊಗ್ಗ ಬರಹಗಾರರ ಸಂಘ ಉದ್ಘಾಟನೆ ಅಂತರ್ಜಾಲ 'ಅನ್ನದಾತ' ಕವಿಗೋಷ್ಠಿ

ಶಿವಮೊಗ್ಗ : ಶಿವಮೊಗ್ಗ ಜಿಲ್ಲೆಯಲ್ಲಿ ಕರ್ನಾಟಕ ರಾಜ್ಯ ಬರಹಗಾರರ ಜಿಲ್ಲಾ ಸಂಘ ಉದ್ಘಾಟನೆಯಾಯಿತು.


ಅಧ್ಯಕ್ಷ ಮಧುನಾಯ್ಕ ಲಂಬಾಣಿ ಸಂಘವನ್ನು ಉದ್ಘಾಟಿಸಿ ಮಾತನಾಡಿದರು. ಹಸಿರ ಮಡಿಲಲಿ ಹಸನವಾದ ಸಾಹಿತ್ಯ ಸಂಗಮ ಕ್ಷೇತ್ರದಲ್ಲಿ ನೂತನ ಬರಹಗಾರರ ಸಂಘ ಪ್ರಸ್ತುತ ದಿನಗಳಲ್ಲಿ ಉದಯಿಸಿದ್ದು ಈ ಸಂಘವು ಮುಂದಿನ ದಿನಗಳಲ್ಲಿ ಅನೇಕ ಯುವ ಬರಹಗಾರರಿಗೆ ಸಾಹಿತ್ಯ ರಚನೆಗೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಕಾರ್ಯಕ್ರಮಗಳನ್ನು ಆಯೋಜಿಸಿ ಕನ್ನಡ ಸಾರಸ್ವತ ಲೋಕಕ್ಕೆ ಮತ್ತಷ್ಟು ಉನ್ನತವಾದ ಸ್ಥಾನ ಸಿಗುವಂತಾಗಲಿ,ಬರೆಯೋಣ ಬರೆಸೋಣ ಕಲಿಯೋಣ ಕಲಿಸೋಣ ಎನ್ನುವ ಸಂಘದ ಧ್ಯೇಯವಾಕ್ಯ ಸಾರ್ಥಕವಾಗಲಿ ಎಂದು ತಮ್ಮ ಉದ್ಘಾಟನಾ ನುಡಿಯಲ್ಲಿ ಹೇಳಿದರು.

ಪ್ರಾಸ್ತಾವಿಕ ನುಡಿಗಳನ್ನಾಡಿದ ಕೆ. ಬಾರಾವಲಿ ಬಾವಿಹಳ್ಳಿ ಸಂಘವು ಈಗಾಗಲೆ ರಾಜ್ಯದ 30 ಜಿಲ್ಲೆಯಲ್ಲಿ ರಚನೆಯಾಗಿದ್ದು ಆ ಮೂಲಕ ಯುವ ಬರಹಗಾರರಿಗೆ,ವಿಧ್ಯಾರ್ಥಿಗಳಿಗೆ ಸಾಹಿತ್ಯಿಕ ಚಟುವಟಿಕೆಗಳಲ್ಲಿ ತೊಡಗುವಂತೆ ನಮ್ಮ ಈ ಸಂಘ ಹಲವಾರು ಚಟುವಟಿಕೆಗಳನ್ನು ಕೈಗೊಂಡು ಯಶಸ್ವಿಯತ್ತ ಸಾಗುತ್ತಿದೆ ಎಂದರು.

ಅನ್ನದಾತ ವಿಷಯದ ಮೇಲೆ ಅಂತರ್ಜಾಲ ಕವಿಗೋಷ್ಟಿ ಹಮ್ಮಿಕೊಂಡಿದ್ದು ಈ ಗೋಷ್ಠಿಯಲ್ಲಿ ರಾಜ್ಯದ ಹಲವಾರು ಜಿಲ್ಲೆಗಳಿಂದ ಮತ್ತು ಹೊರ ರಾಜ್ಯ ಕೇರಳ,ಮಹಾರಾಷ್ಟ್ರದ ಕವಿಗಳು, ಬರಹಗಾರರು ಭಾಗವಹಿಸಿದ್ದು ವಿಶೇಷವಾಗಿತ್ತು.

ಆಶಯ ನುಡಿಯನ್ನಾಡಿದ ಜಿಲ್ಲಾ ಬರಹಗಾರರ ಬಳಗದ ಅಧ್ಯಕ್ಷ ರಫಿ ರಿಪ್ಪನ್ ಪೇಟೆ, ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚು ಹೆಚ್ಚು ಕವಿಗೋಷ್ಠಿಗಳನ್ನು ಹಮ್ಮಿಕೊಳ್ಳೋಣ ಎಂದು ತಿಳಿಸಿದರು.

ಶಿವಮೊಗ್ಗ ಜಿಲ್ಲಾ ಬರಹಗಾರರ ಬಳಗದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಿ.ಹೆಚ್.ನಾಗೇಂದ್ರಪ್ಪ ಮಾತಾನಾಡಿ ಸುಮಾರು ದಿನಗಳಿಂದ ಶಿವಮೊಗ್ಗ ಜಿಲ್ಲೆಯಲ್ಲಿ ಬರಹಗಾರರ ಬಳಗದ ಸ್ಥಾಪನೆಯ ಚಿಂತನೆಯಲ್ಲಿದ್ದ ನನಗೆ ಇಂದು ಬರಹಗಾರರ ಬಳಗ ಸ್ಥಾಪನೆಯಾಗಿರುವುದರ ಜೊತೆಗೆ ಮೊಟ್ಟ ಮೊದಲ ರಾಜ್ಯ ಮಟ್ಟದ ಅನ್ನದಾತ ವಿಷಯದಲ್ಲಿ ಅಂತರ್ಜಾಲ ಕವಿಗೋಷ್ಠಿ ಯಶಸ್ವಿಯಾಗಿ ನಡೆದಿರುವುದ್ದಕ್ಕೆ ಸಂತೋಷವಾಗಿದೆ ಎಂದು ತಿಳಿಸಿದರು.




ಚಂದ್ರಶೇಖರಪ್ಪ ಚಕ್ರಸಾಲಿ ಶಿವಮೊಗ್ಗ ಜಿಲ್ಲಾ ಸಾಹಿತ್ಯಕ್ಕೆ ಹೆಸರಾದ ಅನೇಕ ಹೆಸರಾಂತ ಪ್ರಸಿದ್ಧ ಕವಿಗಳಾದ ಕುವೆಂಪು,ಜಿ.ಎಸ್.ಶಿವರುದ್ರಪ್ಪ ನಿತ್ಯೋತ್ಸವ ಕವಿ ನಿಸಾರ್ ಅಹಮದ್ ಹುಟ್ಟಿ ಬೆಳೆದ ತವರೂರು ಶಿವಮೊಗ್ಗೆಯಲ್ಲಿ ಇನ್ನೂ ಹೆಚ್ಚಿನ ಕವಿಗಳು ಸಾಹಿತ್ಯದಲ್ಲಿ ಪ್ರಬುದ್ಧ ಸಾಧಿಸಲಿ ಎಂದು ಆಶಿಸಿದರು.

ಅಳೂರು ಚಂದ್ರಪ್ಪ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಉಪಾಧ್ಯಕ್ಷ ಖಂಡೂ ಬಂಜಾರ, ಪ್ರಧಾನ ಕಾರ್ಯದರ್ಶಿ ಗಳಾದ ಮಹೇಶ್ ಎಸ್.ಹೆಚ್ ಉಪಸ್ಥಿತರಿದ್ದರು.

ಚಂದ್ರಕಾಂತ ಚವ್ಹಾಣ್. ಹೆಚ್.ಜಿ. ಅರ್ಪಿತ, ಹೆಚ್.ಡಿ.ಸುವರ್ಣ, ದೇವ ರಾಜ್ ಬಸವನಹಳ್ಳಿ, ಜಿ.ಬಿ.ಮಾಲತೇಶ, ಮಹಾದೇವಿ ಪಾಟೀಲ್ ಉಪಸ್ಥಿತರಿದ್ದರು.

ಕವಿಗಳಾದ ನಿತ್ಯಶ್ರೀ.ಆರ್. ನಂಜುಂಡೇಶ್ವರ, ಅಕ್ಷತಾ.ಎಸ್.ಗಾಯಿತ್ರಮ್ಮ, ಶಾರದಾ ಉಳವೆ,ಲಲಿತ ನಟೇಶ್,ಸೋಮಶೇಖರ್ ಹಿರೇಮಠ್,ಕು.ದೀಪಿಕಾ ಉಡುಪಿ, ಮಹಮ್ಮದ್ ಗೌಸ್, ಎಸ್.ಟಿ. ವಿಜಯಕುಮಾರ್, ದೇವರಾಜ್ ಬಸವನಹಳ್ಳಿ,ಮಹಾದೇವಿ ಪಾಟೀಲ್, ಶೋಭಾ ಸತೀಶ್,ನಳಿನಿ ಬಾಲಸುಬ್ರಹ್ಮಣ್ಯಂ,ಜಿ.ಟಿ. ಹನುಮಂತಪ್ಪ, ಜಿ.ವಿ.ನಾಗರತ್ನಮ್ಮ, ಲಕ್ಷ್ಮೀ ನಾಯ್ಕ್, ಮಂಜುನಾಥ್ ಪೂಜಾರಿ,ಸೋಮಶೇಖರ್ ಬಾರ್ಕಿ, ನರ್ಸಿಂಗ್ ಲಮಾಣಿ, ರೇಖಾ ಸಂದೇಶ್,ರೇಣುಕಾ ಶಿವಪ್ಪ, ಕಸ್ತೂರಿ ಬಾಯಿರಾಜೇಶ್ವರ,ಸಿ.ಪಿ.ರಾಧಾ, ಎಸ್.ಎಸ್.ಪರಿಣಿತ,ಬಸಮ್ಮ ಹಿರೇಮಠ್,ಕು.ವೈಷ್ಣವಿ, ಸುರೇಶ್ ಕಲಾಪ್ರಿಯಾ, ಮಾಲಾ ಪ್ರಸಾದ್, ರಶ್ಮಿ ಸನಿಲ್, ಎಮ್.ಜಿ. ಶಾಸ್ತ್ರಿ, ಸೌಮ್ಯ ಗುರುರಾಜ್, ಬಸವರಾಜ ನಾಗೂರು,ಶೈಲಜಾ ಪೋಮಾಜಿ ಮಹಾರಾಷ್ಟ್ರ, ಪ್ರಭಾವತಿ ಕದಿಲಾಯ ಕೇರಳ, ಕು.ಸುರಭಿ, ವಿಶಾಲಾಕ್ಷಿ ಸುಬ್ರಹ್ಮಣ್ಯ ಕೇರಳ, ಅನ್ನದಾತ ವಿಷಯ ಕುರಿತು ಕವನ ವಾಚನ ಮಾಡಿದರು.

## ಮೇಕೆದಾಟು ಯೋಜನೆ ಕೈಗೆತ್ತಿಕೊಳ್ಳದಿರುವ ಸರ್ಕಾರದ ನೀತಿ ಖಂಡಿಸಿ ಪ್ರತಿಭಟನೆ



ಮೈಸೂರು : ಕನ್ನಡ ಚಳವಳಿ ವಾಟಾಳ್ ಪಕ್ಷದ ವತಿಯಿಂದ ಅಧ್ಯಕ್ಷ ವಾಟಾಳ್ ನಾಗರಾಜ್ ಅವರು ನಗರದ ಆರ್.ಗೇಟ್ ವೃತ್ತದ ಬಳಿ ಮೇಕೆದಾಟು ಯೋಜನೆಯನ್ನು ಕೈಗೆತ್ತಿಕೊಳ್ಳದಿರುವ ಸರ್ಕಾರದ ನೀತಿಯನ್ನು ಖಂಡಿಸಿ ಹಾಗೂ ತಮಿಳುನಾಡಿನಲ್ಲಿ ನದಿ ಜೋಡಣೆ ಮಾಡುತ್ತಿದ್ದರೂ ಕರ್ನಾಟಕ ಸರ್ಕಾರಕ್ಕೆ ಈ ಬಗ್ಗೆ ಯಾವ ಚಿಂತನೆಯಿಲ್ಲ ಎಂದು ಆರೋಪಿಸಿ ಪ್ರತಿಭಟನೆ ನಡೆಸಿದರು.

ಬಳಿಕ ಮಾತನಾಡಿದ ಅವರು ಮೇಕೆದಾಟು ವಿಳಂಬವಾಗುತ್ತಿರುವುದು ಕರ್ನಾಟಕದಿಂದಲೇ. ಮೇಕೆದಾಟು ಆರಂಭವಾಗದಿರಲು ಕಾಂಗ್ರೆಸ್, ಬಿಜೆಪಿ ಹಾಗೂ ಜಂಟಿ ಸರ್ಕಾರಗಳೇ ಹೊಣೆ. ಮುಖ್ಯಮಂತ್ರಿ ಆಗಬೇಕು, ದರ್ಬಾರ್ ಮಾಡಬೇಕು. ಜನರ ಬಗ್ಗೆ ಚಿಂತೆ ಇಲ್ಲ. ಮೇಕೆದಾಟು ಯೋಜನೆ ಬಗ್ಗೆ ತಮಿಳುನಾಡಿನ ಮುಖ್ಯಮಂತ್ರಿ ಅವರಿಗೆ ಏಕೆ ಪತ್ರ ಬರೆದರು. ಈ ಮೂಲಕ ಕರ್ನಾಟಕದ ಹಿತವನ್ನು ಮರೆತಿದ್ದು, ಕರ್ನಾಟಕ ಜನತೆಗೆ ಅಗೌರವವನ್ನು ಉಂಟು ಮಾಡಿದ್ದಾರೆ.

ಯಡಿಯೂರಪ್ಪ ನವರೇ ಮೇಕೆದಾಟು ಯೋಜನೆ ಆರಂಭಿಸಲು ಯಾವ ಕ್ರಮ ತೆಗೆದುಕೊಂಡಿದ್ದೀರಿ. ಇದು ಕಡಲೆ ಪುರಿ ತಿನ್ನುವ ರೀತಿಯಲ್ಲ. ಯೋಜನೆ ಆರಂಭಿಸಲು ನಿಮ್ಮ ಬಳಿ ಇರುವ ಸಲಕರಣೆಗಳು ಏನು, ಎಲ್ಲಿ ಆರಂಭಮಾಡುತ್ತೀರಾ. ಬ್ಲೂ ಪ್ರಿಂಟ್ ರೆಡಿ ಇದೆಯೇ. ಈ ಬಗ್ಗೆ ಹೇಳಬೇಕು ಎಂದು ಒತ್ತಾಯಿಸಿದರು.

ಯಡಿಯೂರಪ್ಪರವರೇ ನಿಮಗೆ ಗಂಡಸುತನ, ತಾಕತ್ತು ಇದ್ದರೆ ಒಂದು ವಾರದಲ್ಲಿ ಯೋಜನೆ ಬಗ್ಗೆ ಮಾಹಿತಿ ಕೊಡಿ. ತಮಿಳುನಾಡಿನಲ್ಲಿ ದೊಡ್ಡ ನದಿ ಜೋಡಣೆ ಕೆಲಸ ಕಳೆದ 06 ತಿಂಗಳಲ್ಲಿ ಪ್ರಾರಂಭವಾಯಿತು. ಮೋದಿ ಅವರಿಗೆ ಕರ್ನಾಟಕದ ಮೇಲೆ ಗೌರವ ಇದ್ದರೆ ಯೋಜನೆ ಗೆ ಹಣ ನೀಡಿ. ಇಲ್ಲದಿದ್ದರೆ ಮುಂದಿನ ವಾರ 11/07/2021 ರಂದು ರಾಮನಗರ ಜಿಲ್ಲೆಯಲ್ಲಿ ರಾಷ್ಟ್ರೀಯ ಹೆದ್ದಾರಿ ಬಂದ್ ಮಾಡಲಾಗುತ್ತದೆ ಎಂದು ಎಚ್ಚರಿಸಿದರು.

ಸುರೇಶ್ ಕುಮಾರ್ ಅವರೇ ಎಸ್.ಎಸ್.ಎಲ್.ಸಿ ಪರೀಕ್ಷೆ ರದ್ದು ಮಾಡಿ. ಪಿಯುಸಿ ಖಾಸಗಿ ವಿದ್ಯಾರ್ಥಿಗಳನ್ನು ಕೂಡಲೇ ಪಾಸ್ ಮಾಡಿ ಎಂದರು.

ಯತ್ನಾಳ್ ಅವರಿಗೆ ಮೈಸೂರು ಮೀಡಿಯಾ ಸಾಕಷ್ಟು ಪ್ರಚಾರ ಕೊಟ್ಟಿದ್ದೀರಿ. ಯತ್ನಾಳ್ ಟುಸ್ ಪಟಾಕಿ. ಯಡಿಯೂರಪ್ಪ ಭ್ರಷ್ಟಾಚಾರಿ ಇವರನ್ನು ತೆಗೆಯಲು ಯತ್ನಾಳ್ ರಿಂದ ಆಗುವುದಿಲ್ಲ. ನೂರು ಜನ ಯತ್ನಾಳ್ ಬಂದರೂ ಸಾಧ್ಯವಿಲ್ಲ. ಕೇಂದ್ರ ಸರ್ಕಾರವೇ ಹಿಂದೆ ಮುಂದೆ ನೋಡುತ್ತಿದೆ. ಯಡಿಯೂರಪ್ಪ ಈ ರಾಜ್ಯದ ಮುಖ್ಯಮಂತ್ರಿ ಹುದ್ದೆಯಿಂದ ತೆಗೆದರೆ ಬಿಜೆಪಿಯ ಪಕ್ಷ ಉಳಿಯುವುದಿಲ್ಲ.

ಯಡಿಯೂರಪ್ಪ ಬಹಳ ಮಾಯಾವಿ. ನಾನೊಬ್ಬನೇ ಅವರ ವ್ಯಕ್ತಿತ್ವ ಜೀವಾಳ ತಿಳಿದಿರುವುದು. ಯಡಿಯೂರಪ್ಪ ಅಧಿಕಾರಕ್ಕೆ ಬಂದಿದ್ದೇ ಭ್ರಷ್ಟ ಮಾರ್ಗದಿಂದ. ಬಳ್ಳಾರಿ ಹಣದಿಂದ ಅಧಿಕಾರ ಪಡೆದಿದ್ದಾರೆ ಎಂದು ವಾಗ್ದಾಳಿ ನಡೆಸಿದರು. ಸೈಕಲ್ ಚಳವಳಿ ನಮ್ಮ ಕಾರ್ಯಕ್ರಮ. ಇದರಿಂದ ನಮಗೆ ಸಂತೋಷವಾಗಿದೆ. ನಾನು ಇಲ್ಲೇ ಈ ಹಿಂದೆ ಸೈಕಲ್ ಚಳವಳಿ ಮಾಡಿದ್ದೆ. ನಾನು ಮಾಡಿರುವಷ್ಟು ಚಳವಳಿ ಪ್ರಪಂಚದಲ್ಲಿ ಯಾರು ಮಾಡಿಲ್ಲ. ಕಾಂಗ್ರೆಸ್ ನಲ್ಲಿ ಯಾರೇ ಮುಖ್ಯಮಂತ್ರಿ ಆದರೂ ಏನೂ ಬದಲಾವಣೆ ಆಗುವುದಿಲ್ಲ. 100 ರೂ ಇರುವ ಪೆಟ್ರೋಲ್ ಬೆಲೆ 130 ರೂ ಆಗುತ್ತದೆ ಅಷ್ಟೇ ಎಂದರು.

## 112 ತುರ್ತು ಸೇವೆಗೆ ಗಣಪತಿ ನ್ಯಾ.ಪ್ರಶಾಂತ್ ಚಾಲನೆ

ನಂಜನಗೂಡು: ತಾಲೂಕಿನಲ್ಲಿ 112 ತುರ್ತು ಸೇವೆಗೆ ತಾಲೂಕಿನಾದ್ಯಂತ ಸಂಚರಿಸುವ ವಾಹನಕ್ಕೆ ಹುಲ್ಲಹಳ್ಳಿ ವೃತ್ತದಲ್ಲಿ ಮುಖ್ಯ ನ್ಯಾಯಾಧೀಶರಾದ ಗಣಪತಿ ಪ್ರಶಾಂತ್ ರವರು ಚಾಲನೆ ನೀಡಿದರು.

ನಂತರ ಮಾತನಾಡಿದ ಅವರು, ಸಾರ್ವಜನಿಕರು ಪ್ರಜ್ಞಾವಂತರಾಗಬೇಕು ಸರ್ಕಾರಿ ಸೇವೆಗಳ ಸೌಲಭ್ಯಗಳ ಬಗ್ಗೆ ಮಾಹಿತಿ ಪಡೆದು ಅದನ್ನು ಬಳಸಿಕೊಳ್ಳಬೇಕು ಇದರಿಂದ ನಮ್ಮೆಲ್ಲರಿಗೂ ಉಪಯೋಗವಾಗುತ್ತದೆ ಎಂದರು. 112 ಸೇವೆಯನ್ನು ಬಳಸಿಕೊಳ್ಳಬೇಕು ಎಂದು ಈ ಸಂದರ್ಭದಲ್ಲಿ ತಿಳಿಸಿದರು. ಡಿವೈಎಸ್ಪಿ ಗೋವಿಂದರಾಜು ಮಾತನಾಡಿ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರ ನೂತನವಾಗಿ ನೀಡಿರುವ 112 ಸೇವೆಯನ್ನು ತಾಲೂಕಿನ ಆದಂತ ಎಲ್ಲಾ ಸಾರ್ವಜನಿಕರು ಬಳಸಿಕೊಳ್ಳಬೇಕು ಯಾವುದೇ ತುರ್ತು ಸಂದರ್ಭದ ಹಾಗೂ ಗಲಾಟೆ ಪ್ರಕೃತಿ ವಿಕೋಪ ಮತ್ತು ರಸ್ತೆಗಳಲ್ಲಿ ಆಕ್ಸಿಡೆಂಟ್ ಆದಾಗ ಇಂಥ ಸಂದರ್ಭದಲ್ಲಿ ಸ್ಥಳದಲ್ಲೇ 112 ನಂಬರಿಗೆ ಕಾಲ್ ಮಾಡಿದರೆ ಹತ್ತು ನಿಮಿಷದಲ್ಲಿ ಸ್ಥಳಕ್ಕೆ ಬಂದು ಸ್ಪಂದಿಸುತ್ತಾರೆ ಎಂದರು.




ಆದ್ದರಿಂದ ಸಾರ್ವಜನಿಕರು ಮುಂದಿನ ದಿನಗಳಲ್ಲಿ ಇದನ್ನು ಬಳಕೆ ಮಾಡಿಕೊಳ್ಳಬೇಕು ಎಂದರು. ನಮಗೆ 4 ವಾಹನಗಳಿವೆ 24 ಗಂಟೆ ಸಮಯದಲ್ಲಿ ಕೂಡ ನಿಮ್ಮ ಸೇವೆಗಾಗಿ ಇರುತ್ತದೆ ಇದರ ಉಪಯೋಗವನ್ನು ಬಳಸಿಕೊಳ್ಳಬೇಕೆಂದುಈ ಸಂದರ್ಭದಲ್ಲಿ ತಿಳಿಸಿದರು. ಈ ಸಂದರ್ಭದಲ್ಲಿ ನ್ಯಾಯಧೀಶರಾದ ಗಣಪತಿ ಪ್ರಶಾಂತ್ ಡಿವೈಎಸ್ಪಿ ಗೋವಿಂದರಾಜ ಪಟ್ಟಣದ ಪಿಎಸ್‌ಐ ವಿಜಯರಾಜ್ ಈ ಎಎಸ್‌ಐ ರಾಮ್ ಕುಮಾರ್ ಚೆಲುವಯ್ಯ ಶಿವಸ್ವಾಮಿ ಸೇರಿದಂತೆ ಪೊಲೀಸ್ ಸಿಬ್ಬಂದಿಗಳು ಇದ್ದರು.

ಕ್ರಾಂತಿಯಕಿಡಿ
ಕಾಯಕಯೋಗಿ
KAYAKAYOGI-MORNING DAILY ಕನ್ನಡ ದಿನಪತ್ರಿಕೆ
ಗುರುವಾರ
08 ಜುಲೈ 2021

## ಶ್ರೀ ವೀರಭದ್ರೇಶ್ವರ ಸ್ವಾಮಿ ದೇವಾಲಯದ ಜೀರ್ಣೋದ್ಧಾರಕ್ಕೆ 2 ಲಕ್ಷ ಚೆಕ್ ವಿತರಣೆ

ಕೆ.ಆರ್.ಪೇಟೆ: ತಾಲ್ಲೂಕಿನ ರಾಯಸಮುದ್ರ ಗ್ರಾಮದ ಶ್ರೀ ವೀರಭದ್ರೇಶ್ವರ ಸ್ವಾಮಿ ದೇವಾಲಯದ ಜೀರ್ಣೋದ್ಧಾರಕ್ಕೆ ಶ್ರೀ ಧರ್ಮಸ್ಥಳದ ಧರ್ಮಾಧಿಕಾರಿಗಳಾದ ಡಾ.ವೀರೇಂದ್ರ ಹೆಗ್ಗಡೆಯವರು ಬಿಡುಗಡೆ ಮಾಡಿರುವ 2.50 ಲಕ್ಷ ರೂ.ಅನುದಾನದ ಚೆಕ್ ಅನ್ನು ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ತಾಲ್ಲೂಕು ಯೋಜನಾಧಿಕಾರಿ ಮಮತಾಶೆಟ್ಟಿ ಅವರು ದೇವಾಲಯ ಆಡಳಿತ ಮಂಡಳಿಗೆ ವಿತರಣೆ ಮಾಡಿದರು.



ರಾಯಸಮುದ್ರ ಶ್ರೀ ವೀರಭದ್ರೇಶ್ವರ ದೇವಾಲಯದ ಆವರಣದಲ್ಲಿ ನಡೆದ ಸರಳ ಕಾರ್ಯಕ್ರಮದದಲ್ಲಿ ದೇವಾಲಯ ಸಮಿತಿ ಅಧ್ಯಕ್ಷ ಡಾ.ವೆಂಕಟೇಶ್ ಮತ್ತು ಕಾರ್ಯದರ್ಶಿ ಆರ್.ಎಸ್.ನಾರಾಯಣಗೌಡ, ಕೋಶಾಧಿಕಾರಿ ಆರ್.ಕೆ.ಹೊನ್ನಪ್ಪ ಅವರಿಗೆ ಚೆಕ್ ಅನ್ನು ಹಸ್ತಾಂತರ ಮಾಡಿ ಮಮತಾಶೆಟ್ಟಿ ಮಾತನಾಡಿ, ಧರ್ಮಸ್ಥಳ ಶ್ರೀ ಕ್ಷೇತ್ರದ ಧರ್ಮಾಧಿಕಾರಿಗಳು ರಾಜ್ಯದಲ್ಲಿ ಶಿಥಿಲಗೊಂಡಿರುವ ಸಾವಿರಾರು ದೇವಾಲಯಗಳಿಗೆ ಉಚಿತವಾಗಿ ಲಕ್ಷಾಂತರ ರೂ ದೇಣಿಗೆಯನ್ನು ನೀಡುವ ಮೂಲಕ ನಮ್ಮ ಸಂಸ್ಕೃತಿ ಪರಂಪರೆಯ ಪ್ರತೀಕವಾಗಿರುವ ದೇವಾಲಯಗಳನ್ನು ಉಳಿಸಲು ಕೈಲಾದ ಸಹಾಯ ಮಾಡುತ್ತಿದ್ದಾರೆ. ಇದರ ಜೊತೆಗೆ ಸ್ಥಳೀಯ ದೇವಾಲಯದ ಸಮಿತಿ ಹಾಗೂ ಗ್ರಾಮಸ್ಥರು ದೇವಾಲಯದ ಜೀರ್ಣೋದ್ದಾರಕ್ಕೆ ಉದಾರ ನೆರವು ನೀಡುವ ಮೂಲಕ ದೇವಾಲಯ ಉಳಿಸಲು ಕೈಜೋಡಿಸಬೇಕು. ಇದೇ ರೀತಿ ನಮ್ಮ ರಾಯಸಮುದ್ರ ಗ್ರಾಮಸ್ಥರು ಧರ್ಮಸ್ಥಳಕ್ಕೆ ಹೋಗಿ ದೇವಾಲಯದ ಅಭಿವೃದ್ಧಿಗೆ ಅನುಧಾನ ನೀಡುವಂತೆ ಮನವಿ ಸಲ್ಲಿಸಿದ್ದನ್ನು ಪರಿಗಣಿಸಿ 2,50,000 ರೂ.ಗಳನ್ನು ದೇವಾಲಯಕ್ಕೆ ಬಿಡುಗಡೆ ಮಾಡಿರುತ್ತಾರೆ ಹಾಗಾಗಿ ಗ್ರಾಮಸ್ಥರು ಇದನ್ನು ಸದ್ಬಳಕೆ ಮಾಡಿಕೊಂಡು ದೇವಾಲಯದ ಅಭಿವೃದ್ಧಿ ಕಾರ್ಯ ನಡೆಸಬೇಕು ಎಂದು ಮಮತಾಶೆಟ್ಟಿ ಅವರು ಮನವಿ ಮಾಡಿದರು.

ಸ್ವಸಹಾಯ ಸಂಘದ ಪ್ರಗತಿ ಬಂಧು ಒಕ್ಕೂಟದ ಅಧ್ಯಕ್ಷೆ ನಿರ್ಮಲಾ, ಮೇಲ್ವಿಚಾರಕರಾದ ರೂಪಾ, ಸೇವಾ ಪ್ರತಿನಿಧಿಗಳಾದ ಭವ್ಯ, ಸರಿತಾ ಹಾಗೂ ದೇವಾಲಯದ ಸಮಿತಿ ಸದಸ್ಯರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಬಿಜೆಪಿ ಭಂಡ ಸರ್ಕಾರ: ಸಿದ್ದರಾಮಯ್ಯ ವಾಗ್ದಾಳಿ

ಮೈಸೂರು : ಬಿಜೆಪಿ ಸರ್ಕಾರ ಇದು ಭಂಡ ಸರಕಾರ. ಮಾನವೀಯತೆಯ ಇಲ್ಲದ ಸರಕಾರ ಎಂದು ರಾಜ್ಯ ಸರ್ಕಾರದ ವಿರುದ್ಧ ವಿಪಕ್ಷ ನಾಯಕ ಸಿದ್ದರಾಮಯ್ಯ ವಾಗ್ದಾಳಿ ನಡೆಸಿದರು.

ನಗರದ ಕಾಂಗ್ರೆಸ್ ಭವನದಲ್ಲಿ ಕೆಪಿಸಿಸಿಯ ಮೈಸೂರು ನಗರ ಹಾಗೂ ಗ್ರಾಮಾಂತರ ಸಮಿತಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಪಕ್ಷ ಸೇರ್ಪಡೆ, ಸಹಾಯ ಹಸ್ತ, ಸೈಕಲ್ ಜಾಥಾಗೆ ಚಾಲನೆ ನೀಡಿ ಮಾತನಾಡಿದ ಅವರು ಬಿಪಿಎಲ್ ಕಾರ್ಡ್‌ದಾರರಿಗೆ ತಲಾ 10 ಸಾವಿರ ಕೊಡಬೇಕಿತ್ತು. ನಮ್ಮ ಸರಕಾರ ಇದ್ದಿದ್ದರೆ 10 ಸಾವಿರ ಹಣ, 10 ಕೆಜಿ ಅಕ್ಕಿ ಕೊಡ್ತಿದ್ದೆವು. ಇವರು ದುಡ್ಡು ಹೊಡೆಯುವ ಕೆಲಸ ಮಾಡುತ್ತಿದ್ದಾರೆ. ಇಂಥಹ ಕೆಟ್ಟ ಸರಕಾರವನ್ನು ನನ್ನ ರಾಜಕೀಯ ಜೀವನದಲ್ಲೇ ನೋಡಿರಲಿಲ್ಲ. ಯಡಿಯೂರಪ್ಪ ಮತ್ತು ಅವರ ಮಗ ಜೆಸಿಬಿಯಲ್ಲಿ ಅಗೆಯುತ್ತಾ ಹಣ ಮಾಡುತ್ತಿದ್ದಾರೆ. ಪ್ರಧಾನಿ ಮೋದಿ ಹೇಳುವುದೆಲ್ಲಾ ಸುಳ್ಳು. ಪ್ರಧಾನಿ ಅಚ್ಛೆ ದೀನ್ ಆಯೇಗಾ ಅಂದರೆ ಕೆಟ್ಟ ದಿನ ಬರುತ್ತಿದೆ ಅಂತ ಅರ್ಥ. ಎಲ್ಲರೂ ನಾಚಿಕೆ ಆಗುವಷ್ಟು ಲಂಚ ಪ್ರಕರಣ ನಡೆಯುತ್ತಿದೆ ಆಕ್ಷೇಪಿಸಿದರು.



ಅವರದೇ ಪಾರ್ಟಿಯುವರೆ ಅವರ ಸಚಿವರಿಗೆ ಹಣ ಕೊಟ್ಟು ಕೆಲಸ ತೆಗೆದುಕೊಳ್ಳುತ್ತಿದ್ದಾರೆ. 10% ಇಲ್ಲದೆ ಯಾವ ಫೈಲ್ ಕೂಡ ಈ ಸರಕಾರದಲ್ಲಿ ಮುಂದಕ್ಕೆ ಹೋಗುತ್ತಿಲ್ಲ. ಯಡಿಯೂರಪ್ಪನದು ಸ್ವಾತಂತ್ರ್ಯ ನಂತರದ ಅತ್ಯಂತ ಕೆಟ್ಟ ಮತ್ತು ಭ್ರಷ್ಟ ಸರಕಾರ. ಈ ರಾಜ್ಯವನ್ನು ಇವರು ಹಾಳು ಮಾಡುತ್ತಾರೆ. ಯಡಿಯೂರಪ್ಪ ಎರಡೇ ವರ್ಷದಲ್ಲಿ ಒಂದೂವರೆ ಲಕ್ಷ ಕೋಟಿ ಸಾಲ ಮಾಡಿದ್ದಾರೆ. ಇನ್ನು ಈ ಸರಕಾರ ಮುಂದುವರಿದರೆ ಎಷ್ಟು ಸಾಲ ಮಾಡಬಹುದು ಲೆಕ್ಕ ಹಾಕಿ. ಈ ಸರಕಾರ ಬೇಕಾ ಎಂದು ಕಿಡಿಕಾರಿದರು.

**ಪದೇ ಪದೇ ದ್ರೋಹ ಮಾಡುವವರನ್ನು ಪಕ್ಷಕ್ಕೆ ಸೇರಿಸಿಕೊಳ್ಳಬಾರದು**

ಪದೇ ಪದೇ ದ್ರೋಹ ಮಾಡುವವರನ್ನು ಪಕ್ಷಕ್ಕೆ ಸೇರಿಸಿಕೊಳ್ಳಬಾರದು. ಅಧಿಕಾರಕ್ಕಾಗಿ ಯಾರೂ ಪಕ್ಷಕ್ಕೆ ಬರಬಾರದು. ಜನಸೇವೆಯ ಗುರಿ ಇದ್ದವರನ್ನು ಮಾತ್ರ ಪಕ್ಷಕ್ಕೆ ಸೇರಿಸಿಕೊಳ್ಳಬೇಕು ಎಂದರು.

ಕಾಂಗ್ರೆಸ್ ಎಂದರೆ ಒಂದು ಚಳವಳಿ, ಬಡವರ ಪಕ್ಷ. ನಾವು ನೊಂದವರ ಪರ. ಅನ್ಯಾಯಕ್ಕೆ, ದೌರ್ಜನ್ಯಕ್ಕೆ ಒಳಗಾದವರಿಗೆ ನ್ಯಾಯ ದೊರಕಿಸಿಕೊಡುವುದು ನಮ್ಮ ಕರ್ತವ್ಯ. ಯಡಿಯೂರಪ್ಪ ಹಿಂಬಾಗಿಲಿನಿಂದ ಬಂದು ಸಿಎಂ ಆಗಿದ್ದಾರೆ. 17 ಶಾಸಕರನ್ನು ಖರೀ ದಿಸಿ ಸರ್ಜಾರ ರಚನೆ ಮಾಡಿ ಆಡಳಿತ ನಡೆಸು ತ್ತಿದ್ದಾರೆ. ಕೊರೊನಾ ಮೂರನೇ ಅಲೆ ಸೆಪ್ಟೆಂಬರ್, ಅಕ್ಟೋಬರ್ ನಲ್ಲಿ ಬರುವ ಮಾಹಿತಿ ಇದೆ. ಒಂದು, ಎರಡನೇ ಅಲೆಯಲ್ಲಿ ನಮಗೇನೂ ಆಗಿಲ್ಲ ಎಂದು ಜನ ಮೂರನೇ ಅಲೆಯನ್ನು ನಿರ್ಲಕ್ಷ್ಯ ಮಾಡಬಾರದು. ಇದು ದೊಡ್ಡ ಸಾಂಕ್ರಾಮಿಕ ರೋಗ. ಅದರಿಂದ ದೂರ ಇರಲು ಎಲ್ಲರೂ ಲಸಿಕೆ ಹಾಕಿಸಿಕೊಳ್ಳಬೇಕು. ಎರಡನೇ ಅಲೆಯಲ್ಲಿ ಹೆಚ್ಚು ಮಂದಿ ಸಾವಿಗೀಡಾಗಿದ್ದಾರೆ. ಸರ್ಕಾರ ಹೇಳುವುದಕ್ಕಿಂತ ಹತ್ತು ಪಟ್ಟು ಹೆಚ್ಚು ಜನ ಮರಣ ಹೊಂದಿದ್ದಾರೆ. ಮೂರೂವರೆ ಲಕ್ಷ ಮಂದಿ ಸತ್ತಿರಬಹುದು. ಪ್ರಧಾನಿ ನರೇಂದ್ರ ಮೋದಿಯವರು ಅಚ್ಛೇ ದಿನ್ ಬರುತ್ತದೆ ಎಂದರೆ ಕೆಟ್ಟ ದಿನಗಳು ಮುಂದೆ ಕಾದಿವೆ ಎಂದು ಅರ್ಥ ಮಾಡಿಕೊಳ್ಳಬೇಕು ಎಂದರು.

ಯಡಿಯೂರಪ್ಪ ಅವರು ಈಗಾಗಲೇ ಒಂದೂವರೆ ಲಕ್ಷ ಕೋಟಿ ಸಾಲ ಮಾಡಿದ್ದಾರೆ. ಜನರಿಗೆ ಒಳ್ಳೆಯದಾಗಬೇಕಾದರೆ ಈ ಸರ್ಕಾರ ತೊಲಗಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರಬೇಕು. ಕಳೆದ ಏಳು ವರ್ಷದಲ್ಲಿ ಕೇಂದ್ರ ಸರ್ಕಾರ ರಾಜ್ಯದಿಂದ ಪೆಟ್ರೋಲ್, ಡೀಸೆಲ್ ಮಾರಾಟದ ಮೇಲೆ ವಸೂಲಿ ಮಾಡಿರುವ ತೆರಿಗೆ ಒಂದು ಲಕ್ಷ ಇಪ್ಪತ್ತು ಸಾವಿರ ಕೋಟಿ. ಕೇಂದ್ರ ಸರ್ಕಾರ ಕೂಡಲೇ ತೆರಿಗೆ ಕಡಿಮೆ ಮಾಡಿ ಪೆಟ್ರೋಲ್, ಡೀಸೆಲ್ ದರ ಕಡಿಮೆ ಮಾಡಬೇಕು ಎಂದು ಆಗ್ರಹಿಸಿದರು.

ಬಿಜೆಪಿ ಎಂದರೆ ತಿಗಣೆ ಇದ್ದಂತೆ. ಜನರ ರಕ್ತ ಹೀರುವುದು ಅವರ ಕೆಲಸ. ಆದರೆ ಕಾಂಗ್ರೆಸ್ ಜನರ ಕಣ್ಣೀರು ಒರೆಸುವ ಕೆಲಸ ಮಾಡುತ್ತದೆ. ಸತ್ತವರ ಲೆಕ್ಕ ಸುಳ್ಳೇಳುತ್ತಿದ್ದಾರೆ. ಅದಕ್ಕಾಗಿ ಜನರನ್ನು ತಲುಪತಕ್ಕ ಒಂದು ಕೆಲಸವನ್ನು ಹಮ್ಮಿಕೊಂಡಿದ್ದು, ಸಹಾಯ ಹಸ್ತ ಅಂತ ಕರೆಯುವುದು. ಜನರ ಬಳಿ ಹೋಗಬೇಕು. ಕಾರ್ಯಕರ್ತರು ಮನೆ ಮನೆಗೆ ಹೋಗಿ ಅವರಿಗೆ ಸಾಂತ್ವನ ಹೇಳಿ ಅವರ ಕಷ್ಟ ಸುಖ ಕೇಳಿ, ಅವರಿಗೆ ಕಾಯಿಲೆ ಬಂದಿತ್ತಾ? ಕಾಯಿಲೆ ಬಂದ ಮೇಲೆ ಸತ್ತೋಗಿದ್ದಾರಾ? ಅವರಿಗೆ ಉದ್ಯೋಗ ಇತ್ತಾ? ಅವುಗಳ ಮಾಹಿತಿ ಪಡೆಯಲು ಇದೆಲ್ಲ ಮಾಡುತ್ತಿದ್ದಾರೆ. ಸಹಾಯ ಬೇಕಾದಲ್ಲಿ ಸಹಾಯ ಹಸ್ತ ನೀಡುತ್ತಾರೆ ಎಂದರು.

ಕಾರ್ಯಕ್ರಮದಲ್ಲಿ ಕೆಪಿಸಿಸಿ ಕಾರ್ಯಾಧ್ಯಕ್ಷರಾದ ಧ್ರುವ ನಾರಾಯಣ, ಮಾಜಿ ಸಚಿವರಾದ ಡಾ. ಹೆಚ್.ಸಿ. ಮಹದೇವಪ್ಪ, ರಮಾನಾಥ ರೈ, ಶಾಸಕರಾದ ಮಂಜುನಾಥ್, ಮಾಜಿ ಶಾಸಕರಾದ ವಾಸು, ಸೋಮಶೇಖರ್,ಕೆಪಿಸಿಸಿ ರಾಜ್ಯ ಮಹಿಳಾ ಘಟಕದ ಅಧ್ಯಕ್ಷೆ ಡಾ. ಪುಷ್ಪ ಅಮರನಾಥ್, ಹೆಚ್.ಎ. ವೆಂಕಟೇಶ್, ಮೈಸೂರು ನಗರ ಅಧ್ಯಕ್ಷ ಮೂರ್ತಿ, ಗ್ರಾಮಾಂತರ ಸಮಿತಿ ಅಧ್ಯಕ್ಷ ಡಾ. ವಿಜಯಕುಮಾರ್ ಮತ್ತಿತರರು ಹಾಜರಿದ್ದರು.

ವೇದಿಕೆಯೇರಿ ಗುಂಪು ಗುಂಪಾಗಿ ಬಂದ ಕಾರ್ಯಕರ್ತರನ್ನು ಚದುರಿಸಲು ಮಾಜಿ ಸಿಎಂ ಸಿದ್ದರಾಮಯ್ಯ ಹರಸಾಹಸಪಟ್ಟರು. ಏಯ್ ಯಾರ್ರಿ ಅದು ಇಳಿರಿ ಕೆಳಗೆ ಎಂದು ಕಾರ್ಯಕರ್ತರನ್ನು ಚದುರಿಸಿದರು.

## ಪೆಟ್ರೋಲ್, ಡೀಸೆಲ್ ಬೆಲೆ ಇಳಿಸುವಂತೆ ಒತ್ತಾಯಿಸಿ ಪ್ರತಿಭಟನೆ

ಮೈಸೂರು : ಕೊರೋನಾ ಸಂಕಷ್ಟದ ಸಮಯದಲ್ಲಿ ಪೆಟ್ರೋಲ್ ಡೀಸೆಲ್ ಬೆಲೆಗಳನ್ನು ಇಳಿಸುವಂತೆ ಒತ್ತಾಯಿಸಿ ಸೋಷಲಿಸ್ಟ್ ಯೂನಿಟಿ ಸೆಂಟರ್ ಆಫ್ ಇಂಡಿಯಾದ ಮುಖಂಡರು ನಗರದಲ್ಲಿ ಪ್ರತಿಭಟನೆ ನಡೆಸಿದರು.

ಜಿಲ್ಲಾಧಿಕಾರಿಗಳ ಕಛೇರಿ ಎದುರು ನಡೆದ ಪ್ರತಿಭಟನೆಯಲ್ಲಿ ಪಾಲ್ಗೊಂಡ ಪ್ರತಿಭಟನಾಕಾರರು ಮಾತನಾಡಿ ಎಲ್ಲಾ ಗತ್ಯ ವಸ್ತುಗಳ ತೀವ್ರವಾದ ಬೆಲೆ ಏರಿಕೆ ಯಿಂದ ಜನತೆ ಕಂಗೆಟ್ಟಿದ್ದಾರೆ. ಅಡುಗೆ ಅನಿಲ ಬೆಲೆಯನ್ನು ಮತ್ತೆ 25. ರೂ. ಗೆ ಏರಿಕೆ ಮಾಡಿದ್ದರಿಂದ ಕಳೆದ ಕೆಲವು ತಿಂಗಳುಗಳಲ್ಲಿ 240ರೂ.ಗಳಷ್ಟು ದುಬಾರಿಯಾಗಿದೆ. 840ರ ಸಮೀಪ ಬಂದಿದೆ. ಕೋವಿಡ್ ಬಿಕ್ಕಟ್ಟಿನ ಸಂದ ರ್ಭವನ್ನು ಬಳಸಿಕೊಂಡು ತಮ್ಮ ಸರ್ಕಾರ ಅನಿಲ ಸಬ್ಸಿಡಿಯನ್ನು ಸ್ಥಗಿತಗೊಳಿಸಿದೆ. ಪೆಟ್ರೋಲ್ ಡೀಸೆಲ್ ದರ ಮಿತಿ ಮೀರುತ್ತಿದೆ.




ಕನಿಷ್ಠ ಇವುಗಳ ಮೇಲಿನ ತೆರಿಗೆ ಹೊರೆಯನ್ನು ಕಡಿತಗೊಳಿಸಲು ಸರ್ಕಾರ ಮುಂದಾಗುತ್ತಿಲ್ಲ. ಜಿಎಸ್ ಟಿಯನ್ನು ಪೆಟ್ರೋಲ್,ಡೀಸೆಲ್ ಗಳಿಗೆ ಅನ್ವಯ ಮಾಡುತ್ತಿಲ್ಲ. ಅಡುಗೆ ಎಣ್ಣೆ, ಬೇಳೆಕಾಳುಗಳ ದರ ತುಟ್ಟಿಯಾಗಿದೆ. ಅವಶ್ಯಕ ಔಷಧಿಗಳ ಬೆಲೆಯೂ ಗಗನಕ್ಕೇರಿದೆ ಎಂದು ಸರ್ಕಾರದ ವಿರುದ್ಧ ಘೋಷಣೆ ಕೂಗಿದರು.

ಅಡುಗೆ ಅನಿಲ ದ ಸಬ್ಸಿಡಿ ರದ್ಧತಿಯನ್ನು ವಾಪಸ್ ಪಡೆಯಿರಿ, ಪೆಟ್ರೋಲ್, ಡೀಸೆಲ್ ಮೇಲಿನ ತೆರಿಗೆ ಕಡಿತ ಮಾಡಿ ದರಗಳನ್ನು ಇಳಿಸಿ, ಅಡುಗೆ ಎಣ್ಣೆ, ಬೇಳೆಕಾಳುಗಳು, ಮುಂತಾದ ಅಗತ್ಯ ವಸ್ತುಗಳ ಬೆಲೆ ಏರಿಕೆಯನ್ನು ತಡೆಗಟ್ಟಿ ಎಂದು ಒತ್ತಾಯಿಸಿದರಲ್ಲದೆ, ಮನವಿ ಸಲ್ಲಿಸಿದರು. ಪ್ರತಿಭಟನೆಯಲ್ಲಿ ಚಂದ್ರಶೇಖರ್, ಸೀಮಾ, ಹರೀಶ್ ಸೇರಿದಂತೆ ಹಲವರು ಭಾಗವಹಿಸಿದ್ದರು.

## ಪೆಟ್ರೋಲ್, ಡೀಸೆಲ್, ಗ್ಯಾಸ್ ಬೆಲೆ ಏರಿಕೆ ವಿರುದ್ಧ ಆಕ್ರೋಶ

### ಚಾಮುಂಡೇಶ್ವರಿಯಲ್ಲಿ ಸೈಕಲ್ ಜಾಥಾಗೆ ಸಿದ್ದರಾಮಯ್ಯ ಚಾಲನೆ

ಮೈಸೂರು : ಚಾಮುಂಡೇಶ್ವರಿ ಕ್ಷೇತ್ರದ ಕಾಂಗ್ರೆಸ್ ಕಾರ್ಯಕರ್ತರು ಜಿ.ಪಂ. ಮಾಜಿ ಅಧ್ಯಕ್ಷ ಕೆ. ಮರೀಗೌಡ ನೇತೃತ್ವದಲ್ಲಿ ಪೆಟ್ರೋಲ್ ಡೀಸೆಲ್ ಗ್ಯಾಸ್ ಬೆಲೆ ಏರಿಕೆ ವಿರುದ್ಧ ಹಮ್ಮಿಕೊಂಡಿದ್ದ ಸೈಕಲ್ ಜಾಥಾ ಕಾರ್ಯಕ್ರಮಕ್ಕೆ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ ನೀಡಿದರು.



ಜಿ.ಪಂ. ಮಾಜಿ ಅಧ್ಯಕ್ಷ ಕೆ. ಮರೀಗೌಡ ಮಾತನಾಡಿ, ಕೇಂದ್ರ ಸರ್ಕಾರ ಪ್ರತಿದಿನ ತೈಲಬೆಲೆ ಏರಿಸುವ ಮುಖಾಂತರ ಜನರ ಜೀವಗಳ ಜೊತೆ ಚೆಲ್ಲಾಟ ವಾಡುತ್ತಿದೆ. ಅದೂ ಅಲ್ಲದೇ ಈಗ ಸಾಮಾನ್ಯ ಜನರು ಜೀವನ ಸಾಗಿಸುವುದೇ ಕಷ್ಟವಾಗಿದೆ. ಇಂತಹ ಪರಿಸ್ಥಿತಿಯಲ್ಲಿ ಕೇಂದ್ರ ಸರ್ಕಾರ ನಿತ್ಯಬಳಕೆಯಾದ ಗ್ಯಾಸ್, ಪೆಟ್ರೋಲ್ ಮತ್ತು ಡೀಸೆಲ್‌ಗಳ ಬೆಲೆಯನ್ನು ಏರಿಸಿರುವುದು ಖಂಡನೀಯ. ಆದ್ದರಿಂದ ಕೇಂದ್ರ ಮತ್ತು ರಾಜ್ಯ ಸರ್ಕಾರಗಳನ್ನು ಕಿತ್ತೊಗೆಯಬೇಕೆಂದು ಕರೆ ನೀಡಿದರು. ಈ ಸಂದರ್ಭದಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ವಿರುದ್ಧ ಕಾರ್ಯಕರ್ತರು ಘೋಷಣೆಗಳನ್ನು ಕೂಗಿದರು.

ಮಾಜಿ ಶಾಸಕ ಕೆ. ವೆಂಕಟೇಶ್, ಎಂ.ಕೆ. ಸೋಮಶೇಖರ್, ಜಿ.ಪಂ. ಮಾಜಿ ಸದಸ್ಯರಾದ ಡಿ. ರವಿಶಂಕರ್, ಅರುಣ್‌ಕುಮಾರ್, ನಾರಾಯಣ, ಮಹದೇವ, ನಗರಪಾಲಿಕೆ ಸದಸ್ಯ ಗೋಪಿ, ಗುರುಪಾದಸ್ವಾಮಿ, ಜೆ.ಜೆ. ಆನಂದ, ಚಾಮುಂಡಿಬೆಟ್ಟ ಗ್ರಾ.ಪಂ. ಅಧ್ಯಕ್ಷ ಭರತ್ ಕಾಳಯ್ಯ, ತಾ.ಪಂ. ಮಾಜಿ ಸದಸ್ಯರಾದ ಮಾರ್ಬಳ್ಳಿ ಕುಮಾರ್, ಕೆಂಚಪ್ಪ, ಸಿ.ಎಂ. ಸಿದ್ದರಾಮೇಗೌಡ, ಜಿ.ಕೆ. ಬಸವಣ್ಣ, ಕಾಂಗ್ರೆಸ್ ಸೇವಾದಳ ಮಾಜಿ ಅಧ್ಯಕ್ಷ ಜಯರಾಮೇಗೌಡ, ಗ್ರಾ.ಪಂ. ಮಾಜಿ ಅಧ್ಯಕ್ಷರಾದ ಗೋಪಾಲಪುರ ಗುರುಸ್ವಾಮಿ, ಬಸವರಾಜು, ನಾಡನಹಳ್ಳಿ ರವಿ, ಹಿನಕಲ್ ಪ್ರಕಾಶ್, ಎಸ್.ಎಂ ಮಹೇಶ್, ಇಲವಾಲ ಸುರೇಶ್, ವೈ.ಸಿ. ಸ್ವಾಮಿ, ಬೆಲವತ್ತ ರಾಮಚಂದ್ರ, ನಾರಾಯಣ, ನಜರ್‌ಬಾದ್ ನಟರಾಜು, ದೂರ ನಾಗರಾಜ್, ಮೆಲ್ಲಹಳ್ಳಿ ಮಹಾದೇವಸ್ವಾಮಿ, ಹರೀಶ, ನಾಗವಾಲ ಮಹೇಶ್, ಹರೀಶ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಉಮಾಶಂಕರ್ ಹಾಜರಿದ್ದರು.

## ಕೊರೋನಾ ಹಿನ್ನೆಲೆ ಚಾಮುಂಡಿ ಬೆಟ್ಟಕ್ಕೆ ಪ್ರವೇಶ ನಿರ್ಬಂಧ

ಮೈಸೂರು: ಆಷಾಢ ಮಾಸ ಆರಂಭಕ್ಕೆ ಕೆಲವೇ ದಿನ ಬಾಕಿ, ಮೈಸೂರಿನ ನಾಡದೇವತೆ ಚಾಮುಂಡಿ ಬೆಟ್ಟದಲ್ಲಿ ಆಷಾಢ ಮಾಸದಲ್ಲಿ ಭಕ್ತರ ದಂಡೇ ಸಾಗುತ್ತದೆ. ಆಷಾಢ ಶುಕ್ರವಾರಗಳಂತೂ ಜನವೋ ಜನ.

ಈ ಬಾರಿ ಕೋವಿಡ್–19 ಸಾಂಕ್ರಾಮಿಕ ಭೀತಿ ಇರುವುದರಿಂದ ಆಷಾಢ ಶುಕ್ರವಾರಗಳಂದು ಮತ್ತು ಶನಿವಾರ, ಭಾನುವಾರ ಸೇರಿದಂತೆ ಸಾರ್ವಜನಿಕ ರಜಾ ದಿನಗಳಲ್ಲಿ ಮೈಸೂರಿನ ಚಾಮುಂಡಿ ಬೆಟ್ಟಕ್ಕೆ ಭಕ್ತರ ಪ್ರವೇಶಕ್ಕೆ ನಿರ್ಬಂಧ ವಿಧಿಸಿ ಜಿಲ್ಲಾಧಿಕಾರಿ ಡಾ. ಬಗಾದಿ ಗೌತಮ್ ಆದೇಶ ಹೊರಡಿಸಿದ್ದಾರೆ.

ಆಷಾಢ ಶುಕ್ರವಾರಗಳಂದು ಹೆಚ್ಚಿನ ಭಕ್ತರು ಆಗಮಿಸುವ ಹಿನ್ನೆಲೆ, ಕೋವಿಡ್ ಸೋಂಕು ಹರಡುವಿಕೆಗೆ ಮುಂಜಾಗ್ರತಾ ಕ್ರಮವಾಗಿ ಚಾಮುಂಡಿಬೆಟ್ಟ ಹಾಗೂ ಉತ್ತನಹಳ್ಳಿ ಜ್ವಾಲಾಮುಖಿ ತ್ರಿಪುರಸುಂದರಿ ದೇವಾಲಯಕ್ಕೆ ಸಾರ್ವಜನಿಕರ ನಿರ್ಬಂಧ ವಿಧಿಸಲಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೊರೊನಾ ಅನ್‌ಲಾಕ್ ಹಿನ್ನೆಲೆಯಲ್ಲಿ ಜುಲೈ 5ರಿಂದ ಧಾರ್ಮಿಕ ಕೇಂದ್ರಗಳಿಗೆ ಭಕ್ತರ ಪ್ರವೇಶಕ್ಕೆ ಅವಕಾಶ ಕಲ್ಪಿಸಿ ರಾಜ್ಯ ಸರ್ಕಾರ ಆದೇಶ ಹೊರಡಿಸಿತ್ತು. ಹೀಗಾಗಿ ಸೋಮವಾರ ಚಾಮುಂಡಿ ಬೆಟ್ಟಕ್ಕೆ ನೂರಾರು ಭಕ್ತರು ಭೇಟಿ ನೀಡಿ, ದೇವಿಯ ದರ್ಶನ ಪಡೆದಿದ್ದರು.

### ಜಿಲ್ಲಾ ಮತ್ತು ತಾಲೂಕು ಪಂಚಾಯಿತಿ ಚುನಾವಣೆ

# ಎಚ್ಡಿಕೆ ಬಿಜೆಪಿಯೊಂದಿಗೆ ಒಳ ಒಪ್ಪಂದಕ್ಕೆ ಮುಂದಾಗಿದ್ದಾರೆ: ಸೈನಿಕ ಆರೋಪ

ಮದ್ದೂರು : ಜಿಲ್ಲಾ ಮತ್ತು ತಾಲೂಕು ಪಂಚಾಯಿತಿ ಚುನಾವಣೆಯನ್ನು ದೃಷ್ಟಿಯಲ್ಲಿಟ್ಟುಕೊಂಡು ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವರು ಸ್ಥಾನ ಹೊಂದಾಣಿಕೆಗಾಗಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರೊಂದಿಗೆ ಒಳ ಒಪ್ಪಂದಕ್ಕೆ ಮುಂದಾಗಿದ್ದಾರೆಂದು ಪ್ರವಾಸೋದ್ಯಮ ಖಾತೆ ಸಚಿವ ಸಿ.ಪಿ.ಯೋಗೇಶ್ವರ್ ಗಂಭೀರ ಆರೋಪ ಮಾಡಿದರು.



ಮದ್ದೂರು ಪಟ್ಟಣದಲ್ಲಿ ಪ್ರವಾಸಿ ಮಂದಿರದಲ್ಲಿ ಸಚಿವ ಸಿ.ಪಿ.ಯೋಗೇಶ್ವರ್ ಅವರನ್ನು ಬಿಜೆಪಿ ತಾಲೂಕು ಅಧ್ಯಕ್ಷ ಪಣ್ಣೆದೊಡ್ಡಿ ರಘು ಅಭಿನಂದಿಸಿದರು. ಮುಖಂಡರಾದ ಮ.ನ.ಪ್ರಸನ್ನಕುಮಾರ್, ಸ್ವಾಮಿ, ಮಧುಕುಮಾರ್, ಧನಂಜಯ ಇದ್ದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಬಿಜೆಪಿ ಮುಖಂಡರಿಂದ ಅಭಿನಂದನೆ ಸ್ವೀಕರಿಸಿದ ಬಳಿದ ಸುದ್ದಿಗಾರರೊಂದಿಗೆ ಮಾತನಾಡಿದರು, ಮುಖ್ಯಮಂತ್ರಿ ಯಡಿಯೂರಪ್ಪ ಹಾಗೂ ಮಾಜಿ ಮುಖ್ಯಮಂತ್ರಿ ಕುಮಾರ ಸ್ವಾಮಿ ರಾಜಕೀಯವಾಗಿ ಉತ್ತಮ ಬಾಂಧವ್ಯ ಹೊಂದಿದ್ದಾರೆ. ಹೀಗಾಗಿ ಜಿಪಂ ಹಾಗೂ ತಾಪಂ ಚುನಾವಣೆಯ ಮೀಸಲಾತಿಯನ್ನು ದೃಷ್ಟಿಯಲ್ಲಿಟ್ಟುಕೊಂಡು ಕುಮಾರಸ್ವಾಮಿ ಸ್ಥಾನ ಹೊಂದಾಣಿಕೆಗೆಗಾಗಿ ಒಳ ಒಪ್ಪಂದಕ್ಕೆ ಸಂಚು ನಡೆಸುತ್ತಿದ್ದಾರೆ ಎಂದು ಆರೋಪಿಸಿದರು.

ರಾಮನಗರ, ಮಂಡ್ಯ, ಮೈಸೂರು, ಹಾಸನ ಜಿಲ್ಲೆಗಳಲ್ಲಿ ಬಿಜೆಪಿಯನ್ನು ಶಕ್ತಿಯುತ ವಾಗಿ ಕಟ್ಟುವ ಬದಲು ಯಡಿಯೂರಪ್ಪ ಅವರು, ಕುಮಾರಸ್ವಾಮಿಯೊಂದಿಗೆ ಸ್ನೇಹ ಬಾಂಧವ್ಯದಿಂದ ವರ್ತಿಸುತ್ತಾ, ಬಿಜೆಪಿ ಪಕ್ಷ ಬೆಳವಣಿಗೆಗೆ ಹಿನ್ನೆಡೆ ಉಂಟು ಮಾಡುತ್ತಿದ್ದಾರೆಂದು ಬೇಸರ ವ್ಯಕ್ತಪಡಿಸಿದರು.

ಯಡಿಯೂರಪ್ಪ ಹಾಗೂ ಕುಮಾರಸ್ವಾಮಿ ಅವರ ಒಳಒಪ್ಪಂದಿಂದಾಗಿ ಕೆಲವು ಜಿಲ್ಲೆಗಳಲ್ಲಿ ಬಿಜೆಪಿ ಸಂಘಟನೆಗೆ ಸಮಸ್ಯೆಯಾಗಿದೆ. ಇದರಿಂದ ಬೇಸತ್ತಿರುವ ಪಕ್ಷದ ಕಾರ್ಯಕರ್ತರು ಅತಂತ್ರ ಸ್ಥಿತಿ ತಲುಪಿದ್ದಾರೆಂದು ನೋವು ವ್ಯಕ್ತಪಡಿಸಿದರು.

ಹಳೇ ಮೈಸೂರು ಪ್ರಾಂತ್ಯದಲ್ಲಿ ಕಾಂಗ್ರೆಸ್ ನೆಲ ಕಚ್ಚಿದೆ. ಇಂತಹ ಸಂದರ್ಭದಲ್ಲಿ ಪಕ್ಷದ ಕಾರ್ಯಕರ್ತರನ್ನು ಉರಿದುಂಬಿಸಿ ಸಂಘಟನೆಗೆ ಬಳಸಿಕೊಳ್ಳಬೇಕಾದ ಸಂದರ್ಭದಲ್ಲಿ ಪಕ್ಷದ ನಾಯಕರುಗಳು ಜೆಡಿಎಸ್ ನೊಂದಿಗೆ ಒಳ ಒಪ್ಪಂದ ಮಾಡಿಕೊಳ್ಳುತ್ತಿರುವುದರಿಂದದ ಮುಂದಿನ ಸ್ಥಳಿಯ ಚುನಾವಣೆಗಳಲ್ಲಿ ಪಕ್ಷಕೆ ಹೀನ್ನಡೆಯಾಗುವ ಸಾಧ್ಯತೆಯಿದೆ ಎಂದರು.

ಕಾಂಗ್ರೆಸ್‌ನಲ್ಲಿ ಗುಂಪು ಗಾರಿಕೆಯಿದೆ. ಮುಖ್ಯಮಂತ್ರಿ ಸ್ಥಾನಕ್ಕಾಗಿ ಮಾಜಿ ಮುಖ್ಯ ಮಂತ್ರಿ ಸಿದ್ದರಾಮಯ್ಯ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರ ನಡುವೆ ಪೈಪೋಟಿ ನಡೆಯುತ್ತಿದೆಂದು ವ್ಯಂಗ್ಯವಾಡಿದರು.

**ಎಚ್‌ಡಿಕೆ ಹೇಳಿಕೆ ಸರಿಯಲ್ಲ:** ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಅವರು ಸಂಸದೆ ಸುಮಲತಾ ಅವರ ವಿರುದ್ಧ ಅಶ್ಲೀಲ ವಾಗಿ ಮಾತನಾಡಿರುವುದು ಅವರ ವ್ಯಕ್ತಿತ್ವ ವನ್ನು ಸಾಬೀತು ಪಡಿಸಿದೆ ಎಂದರು.

ಎಚ್.ಡಿ.ಕುಮಾರಸ್ವಾಮಿ ಹೆಣ್ಣಿಗೆ ಅಗೌರವದಿಂದ ಮಾತನಾಡಿರುವುದು ಹೊಸದಲ್ಲ. ಹಿಂದೊಮ್ಮೆ ಪ್ರತಿಭಟನೆ ನಡೆಸುತ್ತಿದ್ದ ರೈತ ಮಹಿಳೆಯೊಂದಿಗೂ ಸಹಾ ಅಶ್ಲೀಲವಾಗಿ ಕುಮಾರಸ್ವಾಮಿ ಮಾತನಾಡಿರುವುದನ್ನು ಮಾಧ್ಯಮಗಳಲ್ಲಿ ನೋಡಿದ್ದೇವೆ. ಹೀಗಾಗಿ ಅವರು, ನಡೆ ನುಡಿಯನ್ನು ಬದಲಾವಣೆ ಮಾಡಿಕೊಳ್ಳುವುದು ಉತ್ತಮ ಎಂದು ಸಲಹೆ ನೀಡಿದರು.

ಕಳೆದ ಲೋಕಸಭಾ ಚುನಾವಣೆಯಲ್ಲಿ ತಮ್ಮ ಪುತ್ರ ನಿಖಿಲ್ ಕುಮಾರಸ್ವಾಮಿ ಅವ ರನ್ನು ಸೋಲಿಸಿದರು ಎಂಬ ಕಾರಣಕ್ಕಾಗಿ ರಾಜ ಕೀಯ ದ್ವೇಷ ಇಟುಕೊಂಡು ಸುಮಲತಾ ವಿರುದ್ಧ ಅಶ್ಲೀಲವಾಗಿ ಮಾತನಾಡಿರುವುದು ಅವರ ಘನತೆಗೆ ತಕ್ಕುದಲ್ಲ ಎಂದು ತಿಳಿಸಿದರು.

**ಉದ್ಯಾನಕ್ಕೆ 4 ಕೋಟಿ:** ತಾಲೂಕಿನ ಹನುಮಂತ ನಗರದ ಉದ್ಯಾನವನದ ಅಭಿವೃದ್ಧಿಗಾಗಿ ಮಾಜಿ ಸಂಸದ ಜಿ.ಮಾದೇಗೌಡರ ಮನವಿ ಮೇರೆಗೆ ಪ್ರವಾಸೋದ್ಯಮ ಇಲಾಖೆಯಿಂದ 4 ಕೋಟಿ ರೂ.ಅನುದಾನ ನೀಡಲಾಗಿದೆ ಎಂದು ಪ್ರವಾಸೋದ್ಯಮ ಸಚಿವ ಸಿ.ಪಿ. ಯೋಗೇಶ್ವರ ತಿಳಿಸಿದರು.

ಉದ್ಯಾನಕ್ಕೆ ಪ್ರವಾಸೋದ್ಯಮ ಸ್ಪರ್ಶದ ನೀಡುವ ಮೂಲಕ ಅಲ್ಲಿ ವಿಜ್ಞಾನ ಪಾರ್ಕ್ ಮತ್ತು ಚಿಣ್ಣರ ರೈಲು ಯೋಜನೆಗೆ ಇಲಾಖೆಯ ವತಿಯಿಂದ ಅನುಮೋದನೆ ನೀಡಲಾಗಿದೆ ಎಂದರು.


ಮಂಡ್ಯ ಜಿಲ್ಲೆಯಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ 100 ಕೋಟಿ ಅನುದಾನ ನೀಡಲಾಗಿದೆ. ಕಾಮಗಾರಿಗಳು ವೇಗ ಪಡೆದುಕೊಳ್ಳಬೇಕು ಎಂಬ ಉದ್ದೇಶದಿಂದ ಜಿಲ್ಲಾಧಿಕಾರಿಗಳ ಸಭೆ ನಡೆಸಲಾಗುವುದು ಎಂದರು.

ಮಾಜಿ ಸಂಸದ ಜಿ.ಮಾದೇಗೌಡರು ಕಾವೇರಿ ಹೋರಾಟಗಾರರು, ಗ್ರಾಮಾಂತರ ಪ್ರದೇಶಗಳ ಅಭಿವೃದ್ಧಿಯ ಬಗ್ಗೆ ವಿಶೇಷ ಕಾಳಜಿ ಉಳ್ಳವರು. ಇವರು ದೇವರ ದಯೆ ಯಿಂದ ಶೀಘ್ರವಾಗಿ ಗುಣಮುಖರಾಗಿ ಹೊರ ಬರಲಿ ಎಂದು ದೇವರಲ್ಲಿ ಪ್ರಾರ್ಥನೆ ಮಾಡಿದರು.

ಈ ವೇಳೆ ಬಿಜೆಪಿ ತಾಲೂಕು ಅಧ್ಯಕ್ಷ ಪಣ್ಣೆದೊಡ್ಡಿ ರಘು, ಮುಖಂಡರಾದ ಮ.ನ.ಪ್ರಸನ್ನಕುಮಾರ್, ಮಧುಕುಮಾರ್, ಸ್ವಾಮಿ, ಧನಂಜಯ ಇದ್ದರು.

## 223 ಕೋಟಿ ರೂ. ವೆಚ್ಚದಲ್ಲಿ ನಾಡಪ್ರಭು ಕೆಂಪೇಗೌಡರ 46 ಪಾರಂಪರಿಕ ತಾಣಗಳ ಅಭಿವೃದ್ಧಿ

ಬೆಂಗಳೂರು: ನಾಡಪ್ರಭು ಕೆಂಪೇಗೌಡರ ಕಾಲದ ಸುಮಾರು 46 ಪಾರಂಪರಿಕ ತಾಣಗಳನ್ನು ಮೂರು ಸರ್ಕ್ಯೂಟ್ ಗಳಲ್ಲಿ ಗುರುತಿಸಲಾಗಿದ್ದು, ಪ್ರವಾಸೋದ್ಯಮ ಅಭಿವೃದ್ಧಿಯನ್ನೂ ದೃಷ್ಟಿಯಲ್ಲಿರಿಸಿಕೊಂಡು ಈ ತಾಣಗಳ ಅಭಿವೃದ್ಧಿ ಕಾರ್ಯಕ್ರಮಗಳನ್ನು ಜಾರಿಗೊಳಿಸುವಂತೆ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಸೂಚಿಸಿದರು.



ನಾಡಪ್ರಭು ಕೆಂಪೇಗೌಡ ಅಭಿವೃದ್ಧಿ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ರಾಮನಗರ, ಚಿಕ್ಕಬಳ್ಳಾಪುರ ಮತ್ತು ತುಮಕೂರು ಜಿಲ್ಲೆಗಳಲ್ಲಿನ ಐತಿಹಾಸಿಕ ಸ್ಥಳಗಳನ್ನು ಅಭಿವೃದ್ಧಿ ಪಡಿಸಲು ಪರಿಕಲ್ಪನಾ ಯೋಜನಾ ವರದಿ ಸಿದ್ಧಪಡಿಸಲಾಗಿದೆ. ಇದರಲ್ಲಿ 132 ಕೋಟಿ ರೂ. ವೆಚ್ಚದಲ್ಲಿ ಮಾಗಡಿ ಸರ್ಕ್ಯೂಟ್, 47 ಕೋಟಿ ರೂ. ವೆಚ್ಚದಲ್ಲಿ ಬೆಂಗಳೂರು ಸರ್ಕ್ಯೂಟ್ ಹಾಗೂ 44 ಕೋಟಿ ರೂ. ವೆಚ್ಚದಲ್ಲಿ ನಂದಿ ಸರ್ಕ್ಯೂಟ್ ಗಳನ್ನು ಅಭಿವೃದ್ಧಿ ಪಡಿಸಲು ಯೋಜನೆ ರೂಪಿಸಲಾಗಿದೆ.

ಕೆಂಪೇಗೌಡರ ಪ್ರತಿಮೆಯನ್ನು ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಸಮೀಪ 64 ಕೋಟಿ ರೂ. ವೆಚ್ಚದಲ್ಲಿ 108 ಅಡಿ ಎತ್ತರದ ಕಂಚಿನ ಪ್ರತಿಮೆ ನಿರ್ಮಾಣ ಕಾರ್ಯ ಪ್ರಗತಿಯಲ್ಲಿದೆ. ಈ ಪ್ರತಿಮೆಯ ಸುತ್ತ ಥೀಮ್ ಪಾರ್ಕ್ ನಿರ್ಮಿಸಲು ಯೋಜನೆ ರೂಪಿಸಲಾಗುತ್ತಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

ರಾಮನಗರ ಜಿಲ್ಲೆಯ ಕೆಂಪಾಪುರ ಗ್ರಾಮದಲ್ಲಿ ನಾಡಪ್ರಭು ಕೆಂಪೇಗೌಡರ ವೀರ ಸಮಾಧಿ ಅಭಿವೃದ್ಧಿ ಕಾರ್ಯಕ್ಕೆ ಭೂಸ್ವಾಧೀನ ಪ್ರಕ್ರಿಯೆ ಅಂತಿಮ ಹಂತದಲ್ಲಿದೆ. ಪರಿಕಲ್ಪನಾ ಯೋಜನೆ ಪ್ರಗತಿಯಲ್ಲಿದೆ. 32 ಕೋಟಿ ರೂ. ಅಂದಾಜು ವೆಚ್ಚದಲ್ಲಿ ಈ ಯೋಜನೆ ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಗೆ ಜಮೀನು ಕಳೆದುಕೊಳ್ಳುವ 46 ಕುಟುಂಬಗಳಿಗೆ ಪುನರ್ವಸತಿ, ರಸ್ತೆ ಅಭಿವೃದ್ಧಿ ಮತ್ತಿತರ ಮೂಲಸೌಕರ್ಯ ಒದಗಿಸುವ ಕುರಿತು ವ್ಯವಸ್ಥಿತ ಯೋಜನೆ ರೂಪಿಸಿ ಕ್ರಮ ಕೈಗೊಳ್ಳುವಂತೆ ಸಲಹೆ ನೀಡಿದರು.

ಕೆಂಪೇಗೌಡರ ಜೀವನಾಧಾರಿತ ಪುಸ್ತಕ, ಕಿರುಚಿತ್ರ ಸಿದ್ಧಪಡಿಸಲು ಹಾಗೂ ನಾಡಪ್ರಭು ಕೆಂಪೇಗೌಡರ ಆಡಳಿತಾವಧಿಯ ಕೋಟೆಗಳು, ಕೆರೆಗಳು ಮತ್ತು ಪಾರಂಪರಿಕ ತಾಣಗಳನ್ನು ಪ್ರವಾಸೋದ್ಯಮ ಇಲಾಖೆ, ಸಣ್ಣ ನೀರಾವರಿ, ಬಿಬಿಎಂಪಿ, ಲೋಕೋಪಯೋಗಿ ಇಲಾಖೆ, ಧಾರ್ಮಿಕ ದತ್ತಿ ಇಲಾಖೆ, ಅರಣ್ಯ, ತೋಟಗಾರಿಕೆ ಮತ್ತಿತರ ಇಲಾಖೆಗಳ ಸಹಯೋಗದೊಂದಿಗೆ ಪ್ರವಾಸಿ ತಾಣಗಳಾಗಿ ಅಭಿವೃದ್ಧಿ ಪಡಿಸಲು ಯೋಜನೆ ಸಿದ್ಧಪಡಿಸುವಂತೆ ಮುಖ್ಯಮಂತ್ರಿಗಳು ಸೂಚಿಸಿದರು..

ಉಪಮುಖ್ಯಮಂತ್ರಿ ಡಾ. ಸಿ.ಎನ್. ಅಶ್ವತ್ಥನಾರಾಯಣ, ಬೆಂಗಳೂರು ಗ್ರಾಮಾಂತರ ಸಂಸದ ಡಿ.ಕೆ. ಸುರೇಶ್, ಮಾಗಡಿ ಶಾಸಕ ಮಂಜುನಾಥ್, ಪ್ರಾಧಿಕಾರದ ಸದಸ್ಯರು, ನಗರಾಭಿವೃದ್ಧಿ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ರಾಕೇಶ್ ಸಿಂಗ್ ಮತ್ತು ಇತರ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.